# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 141 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 16–12–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 141 | Title- Code: KARKAN 28269 | Chitradurga | Date: 16-12-2023 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಬದ್ಧ: ಸಿಎಂ ಸಿದ್ದರಾಮಯ್ಯ 2

ಫ್ಲೈಯಿಂಗ್‌ವಿಂಗ್ ಕಾನ್ಫಿರೇಷನ್ ನಿಯಂತ್ರಣ ಭಾರತದ ವಿಕ್ರಮ 3

ಚಳ್ಳಕೆರೆ ಯುಜಿಡಿ ಕಾಮಗಾರಿ ಮಂಜುರಾತಿ ನೀಡಿ: ಶಾಸಕ ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗ್ರೂಪ್-ಸಿ ಹುದ್ದೆ ಸ್ಪರ್ಧಾತ್ಮಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಡಿಸೆಂಬರ್ 16 ಮತ್ತು 17 ರಂದು ಕೆಪಿಎಸ್‌ಸಿ ವತಿಯಿಂದ ವಿವಿಧ ಇಲಾಖೆಗಳಲ್ಲಿನ ಗ್ರೂಪ್–ಸಿ ಹುದ್ದೆಗಳಿಗೆ ನಡೆಯುವ ಸ್ಪರ್ಧಾತ್ಮಕ ಪರೀಕ್ಷೆಯ ಹಿನ್ನಲೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶಿಸಿದ್ದಾರೆ.ಗ್ರೂಪ್–ಸಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯು ಚಿತ್ರದುರ್ಗ ನಗರದ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆ ನಡೆಯುವ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತ ಸಿ.ಆರ್.ಪಿ.ಸಿ ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.ಪರೀಕ್ಷೆ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಪರೀಕ್ಷೆ ನಡೆಯುವ ದಿನಾಂಕದಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮುಚ್ಚುವಂತೆ ಮತ್ತು ಅಭ್ಯರ್ಥಿಯು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್‌ಗಳನ್ನು ತರದಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶ ಹೊರಡಿಸಿದ್ದಾರೆ.

### ಕಾನೂನು ಪದವೀಧರರಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ನವ ಕಾನೂನು ಪದವೀಧರರಿಗೆ ಪ್ರತಿ ಮಾಹೆಯಾನ ರೂ.2,000/– ಪ್ರೋತ್ಸಾಹ ಧನ ನೀಡುವ ಸಂಬಂಧವಾಗಿ ಸರ್ಕಾರದ ಕಾನೂನು ಇಲಾಖೆಯವರು ಸೂಕ್ತ ಕ್ರಮ ಕೈಗೊಳ್ಳಲು ಕೋರಿದ್ದು, ಅದರಂತೆ ಜಿಲ್ಲೆಯ ಅರ್ಹ ನವ ಕಾನೂನು ಪದವೀಧರರಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2024ರ ಜನವರಿ 12 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿಗಳನ್ನು ಡಿಸೆಂಬರ್ 13 ರಿಂದ ಸಲ್ಲಿಸಬಹುದಾಗಿದ್ದು, ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು. ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ನೇರವಾಗಿ ಜಿಲ್ಲಾ ನ್ಯಾಯಾಲಯಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಚಿತ್ರದುರ್ಗ ಜಿಲ್ಲೆಯ ಇತರೆ ಎಲ್ಲಾ ತಾಲ್ಲೂಕುಗಳ ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ಆಯಾ ತಾಲ್ಲೂಕಿನ ಹಿರಿಯ ಸಿವಿಲ್ ನ್ಯಾಯಾಧೀಶರ ಮೂಲಕ ತಮ್ಮ ಅರ್ಜಿಗಳನ್ನು ಸಲ್ಲಿಸಬಹುದು. ಮೊಳಕಾಲ್ಮುರು ತಾಲ್ಲೂಕು ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ಅಲ್ಲಿಯ ಸಿವಿಲ್ ನ್ಯಾಯಾಧೀಶರ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಹತೆಗಳು: ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಡಿಯಲ್ಲಿ ದಿನಾಂಕ:01–06–2022 ರಿಂದ 31–05–2023 ರವರೆಗಿನ ಅವಧಿಯಲ್ಲಿ ವಕೀಲರ ವೃತ್ತಿಗೆ ನೊಂದಾಯಿಸಿಕೊಂಡಿರತಕ್ಕದ್ದು. ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/–ಗಳನ್ನು ಮೀರತಕ್ಕದ್ದಲ್ಲ (ಆದಾಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು), ಸರ್ಕಾರಿ, ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ವಯೋ ನಿವೃತ್ತಿ, ಕಡ್ಡಾಯ ನಿವೃತ್ತಿ ಮತ್ತು ಸ್ವ–ಇಚ್ಛಾ ನಿವೃತ್ತಿ ಹೊಂದಿದ ನಂತರ ವಕೀಲ ವೃತ್ತಿ ನಡೆಸಲು ಇಚ್ಛಿಸುವ ಕಾನೂನು ಪದವೀಧರರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ. ಅಂತಹ ಯಾವುದೇ ಸೇವೆಯಿಂದ ತೆಗೆದು ಹಾಕಲ್ಪಟ್ಟ ಕಾನೂನು ಪದವೀಧರರಿಗೆ ಸಹ ಅನ್ವಯವಾಗುವುದಿಲ್ಲ. ಇಂತಹದೇ ಸೌಲಭ್ಯವನ್ನು ಈ ಯೋಜನೆ, ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗತಕ್ಕದ್ದಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನ್ಯಾಯಾಲಯ, ಚಿತ್ರದುರ್ಗ ಮತ್ತು ಜಿಲ್ಲೆಯ ಹಿರಿಯ ಸಿವಿಲ್ ಜಡ್ಜ್ ನ್ಯಾಯಾಲಯಗಳು ಹಾಗೂ ಸಿವಿಲ್ ಜಡ್ಜ್ ನ್ಯಾಯಾಲಯ, ಮೊಳಕಾಲ್ಮುರು ಹಾಗೂ ಜಿಲ್ಲೆಯ ಎಲ್ಲಾ ವಕೀಲರ ಸಂಘಗಳಲ್ಲಿ ಲಭ್ಯವಿರುವ ಮೇಲ್ಕಂಡ ಸರ್ಕಾರಿ ಆದೇಶದ ಪ್ರತಿಗಳಲ್ಲಿರುವ ಮಾರ್ಗಸೂಚಿಗಳನ್ನು ಮತ್ತು ಅರ್ಜಿ ನಮೂನೆಗಳನ್ನು ಪಡೆದುಕೊಳ್ಳಬಹುದಾಗಿದೆ. ಅರ್ಜಿಗಳನ್ನು ಸ್ವೀಕರಿಸುವ ನಿಗದಿತ ದಿನಾಂಕದ ನಂತರ ತಲುಪುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ತಿಳಿಸಿದ್ದಾರೆ.

## ಕೋಟೆನಾಡಿನ ಲೋಕಸಭೆ ಟಿಕೆಟ್‌ಗಾಗಿ
# ಕಾಂಗ್ರೆಸ್‌ನಲ್ಲಿ ಭಾರೀ ಪೈಪೋಟಿ

» ಚಿತ್ರದುರ್ಗ

ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ ಲೋಕಸಭೆ ಕಾವು ಜೋರಾಗುತ್ತಿದೆ. ಕರ್ನಾಟಕದಲ್ಲಿ ಗ್ಯಾರೆಂಟಿ ಯೋಜನೆಗಳ ಮೂಲಕ ಸ್ಪಷ್ಟ ಬಹುಮತ ಪಡೆದು ರಾಜ್ಯದ ಅಧಿಕಾರದ ಚುಕ್ಕಾಣಿ ಹಿಡಿದಿರುವ ಕಾಂಗ್ರೆಸ್ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಸಹ ಗೆಲುವಿನ ನಾಗಲೋಟ ಮುಂದುವರಸುವ ಹುಮ್ಮಸಿನಲ್ಲಿ ಲೋಕಸಭೆ ಚುನಾವಣಗೆ ಸಜ್ಜಾಗುತ್ತಿದ್ದು ಚಿತ್ರದುರ್ಗ ಲೋಕಸಭೆ ( ಪರಿಶಿಷ್ಟ ಜಾತಿ) ಮೀಸಲು ಕ್ಷೇತ್ರದ ಟಿಕೆಟ್ ಗೆ ಭಾರೀ ಪೈಪೋಟಿ ಏರ್ಪಟ್ಟಿದ್ದು ಯಾರಿಗೆ ಕಾಂಗ್ರೆಸ್ ಟಿಕೆಟ್ ಸಿಗಲಿದೆ ಎಂಬುದು ಇನ್ನು ಸ್ಪಷ್ಟವಾಗಿ ಗೋಚರಿಸುತ್ತಿಲ್ಲ.

ಹೌದು ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಏಂಟು ವಿಧಾನ ಸಭಾ ಕ್ಷೇತ್ರಗಳು ಒಳಪಡುತ್ತದೆ. ಚಿತ್ರದುರ್ಗ , ಚಳ್ಳಕೆರೆ, ಮೊಳಕಾಲ್ಮುರು,ಹೊಸದುರ್ಗ,ಚಿತ್ರದುರ್ಗ, ಸಿರಾ, ಪಾವಗಡ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕರು ಆಯ್ಕೆಯಾಗಿರುವುದು ಟಿಕೆಟ್ ಗೆ ಮತ್ತಷ್ಟು ಪೈಪೋಟಿ ಏರ್ಪಟ್ಟಿದೆ ಎಂದು ರಾಜಕೀಯ ಪಂಡಿತರ ಅಭಿಪ್ರಾಯವಾಗಿದೆ.

ಈ ಬಾರಿ ಚಿತ್ರದುರ್ಗ ಲೋಕಸಭೆ ಕ್ಷೇತ್ರದಲ್ಲಿ ತೀವ್ರ ಪೈಪೋಟಿಯಿಂದ ಚುನಾವಣೆಯ ಟಿಕೆಟ್ ಪಡೆಯಲು ಭಗೀರಥ ಪ್ರಯತ್ನ ನಡೆಸಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧೆ ಮಾಡಲು ತಮಗೆ ಪಕ್ಷದ ಹೈಕಮಾಂಡ್ ಟಿಕೆಟ್ ನೀಡಲಿದೆ ಎನ್ನುವ ನಿರೀಕ್ಷೆಯಲ್ಲಿ ಹಲವಾರು ಅಭ್ಯರ್ಥಿಗಳು ಲೋಕ ಚುನಾವಣೆಗೆ ಓಪನ್ ಆಗಿ ಭರ್ಜರಿ ಪ್ರಚಾರವನ್ನೂ ಸಹ ಮಾಡುತ್ತಿದ್ದಾರೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕುರಿತಂತೆ ಸಮಾಲೋಚನೆ ಸಭೆ ಶನಿವಾರ ಅಂದರೆ ಇಂದು ನಡೆಯಲಿದ್ದು ಚುನಾವಣೆ ಟಿಕೆಟ್ ಗಿಟ್ಟಿಸಿಕೊಳ್ಳಲು ಅಭ್ಯರ್ಥಿಗಳು ಶಕ್ತಿ ಪ್ರದರ್ಶನಕ್ಕೆ ಮುಂದಾಗಿದ್ದು ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿ ಸೇರಿ ನಗರದ ಎಲ್ಲಾ ಕಡೆಗಳಲ್ಲಿ ಮಹದೇವಪ್ಪ ಅವರ ಫೋಟೋ ಜೊತೆ ಅಭ್ಯರ್ಥಿಗಳು ಮತ್ತು ರಾಜ್ಯ ನಾಯಕರು, ಶಾಸಕರ ,ಮಾಜಿ ಸಚಿವರ ಫೋಟೋ ಗಳು ಬ್ಯಾನರ್ ಗಳಲ್ಲಿ ರಾರಜಿಸುತ್ತಿವೆ.

ಕಳೆದ ವಿಧಾನಸಭೆ ಮತ್ತು ಪರಿಷತ್ ಚುನಾವಣೆಯಲ್ಲಿ ಸೋಲಿನ ರುಚಿ ನೋಡಿದವರು ತಮ್ಮ ರಾಜಕೀಯ ಅಸ್ತಿತ್ವ ಸಾಧಿಸುವ ಉತ್ಸಾಹದಲ್ಲಿದ್ದು ಇದರ ಜೊತೆಗೆ ಯುವ ಮುಖಗಳು ಸಹ ಸಹ ಟಿಕೆಟ್ ಆಕಾಂಕ್ಷಿಗಳ ಲಿಸ್ಟ್ ನಲ್ಲಿದ್ದಾರೆ. ಈಗಾಗಲೇ ಅನೇಕರು ಟಿಕೆಟ್ ನೀಡುವಂತೆ ಬಹಿರಂಗವಾಗಿ ಹಲವು ಬಾರಿ ಶಾಸಕರನ್ನು




ಲೋಕಲ್ ಅಭ್ಯರ್ಥಿ' ದಾಳ! ' ಚಿತ್ರದುರ್ಗ ಕ್ಷೇತ್ರದಲ್ಲಿ ಸ್ಥಳೀಯರಿಗೆ ಟಿಕೆಟ್ ನೀಡಬೇಕು' ಎಂಬ ಹೊಸ ದಾಳದ ಗೇಮ್ ಪ್ಲೇ ಮಾಡುತ್ತಿರುವ ಕಾಂಗ್ರೆಸ್‌ನ ಕೆಲ ಟಿಕೆಟ್ ಆಕಾಂಕ್ಷಿಗಳು ಟಿಕೆಟ್ ಪಡೆಯಲು ಪ್ರಯತ್ನ ಮಾಡುತ್ತಿದ್ದಾರೆ. ಇನ್ನೂ ಚುನಾವಣೆ ಸಮೀಪಿಸುತ್ತಿದ್ದಂತೆ ಸ್ಥಳೀಯ ಅಭ್ಯರ್ಥಿ ದಾಳಕ್ಕೆ ಮತ್ತಷ್ಟು ಧ್ವನಿ ಹೆಚ್ಚಾಗುವ ಸಾಧ್ಯತೆ ಇದೆ. ಚಿತ್ರದುರ್ಗ ಕ್ಷೇತ್ರವನ್ನು ಹಲವು ದಶಕಗಳಿಂದ ಜಿಲ್ಲೆಯ ಹೊರಗಿನವರು ಪ್ರತಿನಿಧಿಸುತ್ತಿದ್ದಾರೆ ಎಂಬ ಆರೋಪವಿದೆ. ಸ್ಥಳೀಯ ಕಾಂಗ್ರೆಸ್ ನಾಯಕರು ಜಿಲ್ಲೆಯವರಿಗೆ ಟಿಕೆಟ್ ನೀಡಬೇಕು ಎಂಬ ಒತ್ತಡ ಹೇರುವ ಪ್ರಯತ್ನ ಮಾಡುತ್ತಿದ್ದಾರೆ. ಇದರ ಜೊತೆಗೆ ಮತದಾರರಿಗೆ ನಮ್ಮವರು ಎಂಪಿ ಆಗಲಿ ಎಂಬ ಭಾವನೆಗಾಗಿ ಮತದಾರರ ಗಮನ ಕೇಂದ್ರಿಕರಿಸುತ್ತಿದ್ದಾರೆ..

**ಚಿತ್ರದುರ್ಗ ಲೋಕಸಭೆ ಕ್ಷೇತ್ರಕ್ಕೆ ನಡೆದಿರುವ ಚುನಾವಣೆ 17**

**11 ಬಾರಿ ಕಾಂಗ್ರೆಸ್ ಗೆಲುವು ಸಾಧಿಸಿದೆ.**

### ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪ



ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪ 2014ರಲ್ಲಿ ಬಿಜೆಪಿ ಅಲೆಯ ನಡುವೆಯು ಗೆಲುವು ಸಾಧಿಸಿದ್ದರು.ಆದರೆ 2019ರ ಚುನಾವಣೆಯಲ್ಲಿ ಸೋಲಿನ ರುಚಿ ನೋಡಿದ್ದರು. ಕ್ಷೇತ್ರದ ಜನರ ಜೊತೆ ನಿಕಟ ಸಂಪರ್ಕ ಮತ್ತು ಕ್ಷೇತ್ರದಲ್ಲಿ ಹಿಡಿತ ಸಾಧಿಸಿದ್ದು ತನ್ನದೇ ಆದ ಅಭಿಮಾನಿಗಳನ್ನು ಹೊಂದಿದ್ದಾರೆ. ಕ್ಷೇತ್ರದಲ್ಲಿ ಸರಳ ಸಜ್ಜನಿಕೆ ವ್ಯಕ್ತಿ ಎಂಬ ಉತ್ತಮ ಅಭಿಪ್ರಾಯ ಸಹ ಇದ್ದು 2024ರ ಚುನಾವಣೆಗೆ ಸ್ಪರ್ಧಿಸುವ ಪಟ್ಟಿಯಲ್ಲಿ ಪ್ರಬಲ ಆಕಾಂಕ್ಷಿಯಾಗಿ ಸ್ಪರ್ಧೆಯ ಇಂಗಿತ ವ್ಯಕ್ತಪಡಿಸಿದ್ದಾರೆ.

### ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ



ಎನ್‌ಎಸ್‌ಯುಐ ಅಧ್ಯಕ್ಷ, ಯುವ ಕಾಂಗ್ರೆಸ್ ಅಧ್ಯಕ್ಷ, ಸಿಂಡಿಕೇಟ್ ಸದಸ್ಯರು ಆಗಿ ಕಾಂಗ್ರೆಸ್ ಪಕ್ಷದಲ್ಲಿ ದಶಕಗಳ ಕಾಲ ದುಡಿದಿದ್ದೇನೆ. ಪಕ್ಷಕ್ಕೆ ನಿಷ್ಠೆಯ ಮೇಲೆ ಮತ್ತು ಸ್ಥಳೀಯ ಅಭ್ಯರ್ಥಿ ಕೋಟಾದಲ್ಲಿ ನನಗೆ ಟಿಕೆಟ್ ನೀಡಬೇಕು ಎಂಬ ಘೋಷಣೆಯಡಿ 2009ರ ಚುನಾವಣೆಯಲ್ಲಿ ಅಭ್ಯರ್ಥಿ ಆಗಿ ಪರಾಭವಗೊಂಡಿದ್ದ ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ ಟಿಕೆಟ್ ಬಯಸುತ್ತಿದ್ದಾರೆ.

### ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರ್ಲಗುಂಟೆ ಎಂ.ರಾಮಪ್ಪ



ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರ್ಲಗುಂಟೆ ಎಂ.ರಾಮಪ್ಪ ಸಹ ಗ್ರಾಮ ಪಂಚಾಯತಿ ಮಟ್ಟದಲ್ಲಿ ಈಗಾಗಲೇ ಮುಖಂಡರನ್ನು ಭೇಟಿ ಮಾಡಿ ಪ್ರಚಾರದ ರೀತಿ ಕ್ಷೇತ್ರವನ್ನು ಸುತ್ತುತಿದ್ದಾರೆ.

### ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿನಯ್ ತಿಮ್ಮಾಪುರ



ಬಾಗಲಕೋಟೆ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಹುದ್ದೆಗಳನನ್ನು ಸಮರ್ಥವಾಗಿ ನಿಭಾಯಿಸಿ, ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಚಿತ್ರದುರ್ಗ ಜಿಲ್ಲಾ ಲೋಕಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಉಸ್ತುವಾರಿ ಆಗಿರುವ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಪುತ್ರ ವಿನಯ್ ತಿಮ್ಮಾಪುರ ಅವರು ಸಹ ಯುವ ಕಾಂಗ್ರೆಸ್ ಕೋಟಾ ದಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಟಿಕೆಟ್ ಗೆ ಲಾಭಿ ನಡೆಸುತ್ತಿದ್ದು ಕ್ಷೇತ್ರದಲ್ಲಿ ಮಠಗಳಿಗೆ ಭೇಟಿ ನೀಡಿ ಸಂಚಲನ ಮೂಡಿಸಿದ್ದಾರೆ.

### ಮಾಜಿ ಸಚಿವ ಹೆಚ್. ಆಂಜನೇಯ



ಕಳೆದ ವಿಧಾನಸಭೆ ಚುನಾವಣೆಯಲ್ಲಿಹೊಳಲ್ಕೆರೆ ವಿಧಾನಸಭೆ ಕ್ಷೆತ್ರದಿಂದ ಸ್ಪರ್ಧಿಸಿ ಸೋಲು ಅನುಭವಿಸಿದ ಮಾಜಿ ಸಚಿವ ಹೆಚ್. ಆಂಜನೇಯ ಲೋಕಸಭೆಗೆ ಸ್ಪರ್ಧಿಸಲಿದ್ದಾರೆ ಎಂಬ ಮಾತುಗಳು ಕ್ಷೇತ್ರದಲ್ಲಿ ಕೇಳಿ ಬರುತ್ತಿವೆ. ಆದರೆ, ಸ್ವತಃ ಮಾಜಿ ಸಚಿವ ಎಚ್.ಆಂಜನೇಯ ನಿರಾಕರಿಸಿದ್ದಾರೆ. ಈ ಬಗ್ಗೆ ಸ್ಪಷ್ಟನೆ ನೀಡಿ'ತಾವು ಲೋಕಸಭೆ ಟಿಕೆಟ್ ಕೋರಿ ಅರ್ಜಿ ಸಲ್ಲಿಸುವುದಿಲ್ಲ. ಲೋಕಸಭೆ ಚುನಾವಣೆ ಇನ್ನೂ ದೂರ ಇದೆ. ಬಹಳಷ್ಟು ಆಕಾಂಕ್ಷಿಗಳು ಇದ್ದಾರೆ. ಪಕ್ಷ ಯಾರಿಗೆ ಟಿಕೆಟ್ ನೀಡಲಿದೆಯೋ ಅವರ ಪರವಾಗಿ ನಿಷ್ಠೆಯಿಂದ ಕೆಲಸ ಮಾಡುವೆ' ಎಂದಿದ್ದರು ಸಹ ಒಂದು ಕಡೆ ತಾವೇ ಅಭ್ಯರ್ಥಿ ಆಗಲು ಪ್ರಯತ್ನ ಮಾಡುತ್ತಿದ್ದಾರೆ ಎಂಬ ಮಾತುಗಳ ಸಹ ಕ್ಷೇತ್ರದಲ್ಲಿ ಇದ್ದು ಆಂಜನೇಯ ಮಾತ್ರ ರಾಜ್ಯದಲ್ಲಿ ಸಿಎಂ ಜೊತೆ ಕಾರ್ಯಕ್ರಮ ಭಾಗವಹಿಸಿಕೊಂಡು ಕ್ಷೇತ್ರದಲ್ಲಿ ಸಂಚರ ನಡೆಸುತ್ತಿರುವುದು ನಾನು ಕೂಡ ಟಿಕೆಟ್ ಆಕಾಂಕ್ಷಿ ಅಂತಾನೋ ಅಥವಾ ನಾನು ಪ್ರಭಾವ ಕುಗ್ಗಿಲ್ಲ ಸೋತರು ಸಹ ಸರ್ಕಾರದಲ್ಲಿ ನಾನು ಪ್ರಭಾವಿ ಎಂಬ ಸಂದೇಶ ವಿರೋಧಿಗಳಿಗೆ ರವಾನಿಸಲು ಎಂಬುದು ಕಾದು ನೋಡಬೇಕಿದೆ.

ಭೇಟಿಯಾಗಿ ಬೆಂಬಲ ಕೋರುವ ಮೂಲಕ ಒತ್ತಡ ಸೃಷ್ಟಿಸುವ ತಂತ್ರ ರೂಪಿಸುತ್ತಿದ್ದಾರೆ. ಹೈಕಮಾಂಡ್ ಮಟ್ಟದಲ್ಲಿ ಪ್ರಭಾವ ಹೊಂದಿರುವ ನಾಯಕರನ್ನು ಸಹ ತೆರೆಮರೆಯಲಿ ಭೇಟಿ ಮಾಡಿ ಹೈಕಮಾಂಡ್ ಆಶೀರ್ವಾದಕ್ಕೆ ಯತ್ನಿಸುತ್ತಿದ್ದಾರೆ.ಇನ್ನೂ ಮಾಜಿ ಸಚಿವ ಪಾವಗಡದ ವೆಂಕಟರಮಣಪ್ಪ ಅವರ ಪುತ್ರ ಕುಮಾರಸ್ವಾಮಿ, ಯುವ ಕಾಂಗ್ರೆಸ್ ನಾಯಕ ಸುನೀಲ್‌ಕುಮಾರ್ ಬಹಿರಂಗವಾಗಿ ಟಿಕೆಟ್ ಯಾಚಿಸಿದ್ದಾರೆ. ಕೆಪಿಸಿಸಿ ವಕ್ತಾರ, ದಾವಣಗೆರೆಯ ಡಿ.ಬಸವರಾಜ್ ಸಹ ಆಕಾಂಕ್ಷಿ ಎಂದು ಸಾರಿದ್ದಾರೆ.

**ಪ್ರಮುಖ ಸುದ್ದಿ**

## ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ಚರ್ಚೆಗೆ ಸಿಎಂ ಉತ್ತರ
# ಕರ್ನಾಟಕದ ಅಭಿವೃದ್ಧಿಗೆ ಘೋಷಿಸಿದ ಹೊಸ ಘೋಷಣೆ

1 ನಂಜುಂಡಪ್ಪನವರ ವರದಿಯ ಅನು ಷ್ಠಾನ ಹಾಗೂ ಅದರ ಫಲಶ್ರುತಿಯನ್ನು ಅಧ್ಯಯನ ಮಾಡಲು ನುರಿತ ಅರ್ಥಶಾಸ್ತ್ರಜ್ಞರೊಬ್ಬರ ಅಧ್ಯಕ್ಷತೆಯಲ್ಲಿ ಹೈಪವರ್ [ಉನ್ನತಾಧಿಕಾರ ಸಮಿತಿ] ಕಮಿಟಿಯನ್ನು ರಚಿಸಲಾಗುವುದು*

ನಂಜುಂಡಪ್ಪ ವರದಿ ಸಲ್ಲಿಕೆಯಾಗಿ 21 ವರ್ಷಗಳಾದವು. ನಂಜುಂಡಪ್ಪನವರ ವರದಿಯನ್ನಾಧರಿಸಿ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮೂಲಕ ಇದುವರೆಗೆ 61330 ಕೋಟಿ ರೂಪಾಯಿಗಳ ಅನುದಾನವನ್ನು ಒದಗಿಸಿದೆ. ಸುಮಾರು 42000 ಕೋಟಿ ರೂಪಾಯಿಗಳನ್ನು ಖರ್ಚು ಮಾಡಿದೆ. ನಂಜುಂಡಪ್ಪನವರ ವರದಿಯನ್ನಾಧರಿಸಿ ನೀಡಲಾಗುವ ವಿಶೇಷ ಅಭಿವೃದ್ಧಿ ಯೋಜನೆಯಡಿಯೇ 32433.43 ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಾಗಿದೆ. ಇದರ ಜೊತೆಯಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿ ವತಿಯಿಂದಲೂ



ಅನುದಾನಗಳನ್ನು ಒದಗಿಸಲಾಗಿದೆ. ಇಷ್ಟೆಲ್ಲ ಮಾಡಿದರೂ ಮಾನವ ಅಭಿವೃದ್ಧಿ ಸೂಚ್ಯಂಕವು ನಿರೀಕ್ಷಿತ ಮಟ್ಟದಲ್ಲಿ ಸುಧಾರಿಸುತ್ತಿಲ್ಲ. ಶಿಕ್ಷಣ, ಆರೋಗ್ಯ, ಆದಾಯಗಳಿಕೆ ಮುಂತಾದವುಗಳಲ್ಲಿ ಹಿನ್ನಡೆಯನ್ನು ಈ ಜಿಲ್ಲೆಗಳು ಅನುಭವಿಸುತ್ತಿವೆ. ಹಾಗಾಗಿ ವಿಶೇಷವಾಗಿ ನಂಜುಂಡಪ್ಪನವರ ವರದಿಯ ಅನುಷ್ಠಾನ ಹಾಗೂ ಅದರ ಫಲಶ್ರುತಿಯನ್ನು ಅಧ್ಯಯನ ಮಾಡಲು ನುರಿತ ಅರ್ಥಶಾಸ್ತ್ರಜ್ಞರೊಬ್ಬರ ಅಧ್ಯಕ್ಷತೆಯಲ್ಲಿ ಹೈಪವರ್ [ಉನ್ನತಾಧಿಕಾರ ಸಮಿತಿ] ಕಮಿಟಿಯನ್ನು ರಚಿಸಲಾಗುವುದು.

2 ಸಹಕಾರ ಬ್ಯಾಂಕುಗಳಲ್ಲಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಅಸಲನ್ನು ಕಟ್ಟಿದರೆ ಸಂಪೂರ್ಣ ಬಡ್ಡಿಯನ್ನು ಮನ್ನಾ* ಮಾಡಲಾಗುವುದು ಎಂದು ನಮ್ಮ ಸರ್ಕಾರ ತೀರ್ಮಾನಿಸಿದೆ.ಇದರಿಂದಸಾಲಮನ್ನಾಮಾಡುವ ಕುರಿತು ನಾವು ನಮ್ಮ ಮ್ಯಾನಿಫೆಸ್ಟೊದಲ್ಲಿ ಹೇಳಿಲ್ಲ. ಬಿಜೆಪಿಯವರು 2018 ರ ತಮ್ಮ ಮ್ಯಾನಿಫೆಸ್ಟೊದಲ್ಲಿ " ನಮ್ಮ ಸರಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿಯೇ ರಾಷ್ಟ್ರೀಕೃತ ಬ್ಯಾಂಕು ಮತ್ತು ಸಹಕಾರಿ ಸಂಘಗಳಲ್ಲಿ ಇರುವ 1 ಲಕ್ಷದವರೆಗೆ ರೈತರ ಬೆಳೆ ಸಾಲ ಮನ್ನಾ ಮಾಡಲಾಗುವುದು" ಎಂದು ಹೇಳಿದ್ದರು. ಆದರೆ ಬಿಜೆಪಿಯವರು ಈ ಕುರಿತು ಏನಾದರೂ ಮಾಡಿದರಾ? ನಯಾಪೈಸೆ ಬಿಡುಗಡೆ ಮಾಡಿದರಾ? ಹೇಳಿ. ಯಡಿಯೂರಪ್ಪನವರು 2019 ರ ಆಗಸ್ಟ್‌ನಲ್ಲಿ ಅತಿವೃಷ್ಟಿಯ ಕಾರಣಕ್ಕೆ ಬೆಳೆ ಹಾನಿಯಾಗಿತ್ತು. ಆಗ ಶಿವಮೊಗ್ಗದಲ್ಲಿ ಯಡಿಯೂರಪ್ಪನವರು ಏನು ಹೇಳಿದರು ಗೊತ್ತಾ? "ಕೇಳಿದಷ್ಟು ಹಣ ಕೊಡಲು ಸರ್ಕಾರದಲ್ಲಿ ನೋಟ್ ಪ್ರಿಂಟ್ ಮಾಡುವ ಯಂತ್ರವಿಲ್ಲ" . ಎಂದು ಹೇಳಿದ್ದರು [ 14–8–2019 – ಶಿವಮೊಗ್ಗ] ಯಡಿಯೂರಪ್ಪನವರು ಈ ರೀತಿ ಹೇಳಿದ್ದು ಇದೇ ಮೊದಲಲ್ಲ. 2009 ರಲ್ಲಿ ವಿಧಾನಪರಿಷತ್ತಿನಲ್ಲಿ ನಮ್ಮ ವಿರೋಧ ಪಕ್ಷದ ನಾಯಕರಾಗಿದ್ದ ವಿ ಎಸ್ ಉಗ್ರಪ್ಪ ಮುಂತಾದ ನಮ್ಮ ಪಕ್ಷದವರು ಸಾಲ ಮನ್ನಾ ಮಾಡಿ ಎಂದು ಆಗ್ರಹಿಸಿದ್ದಾಗಲೂ ಯಡಿಯೂರಪ್ಪನವರು ಇದೇ ಮಾತುಗಳನ್ನಾಡಿದ್ದರು. ಯಡಿಯೂರಪ್ಪನವರು ಹೇಳಿದ್ದ ಮಾತುಗಳಿವು, " ಮತಕ್ಕಾಗಿ ಇತರ ಪಕ್ಷಗಳವರು ಹೇಳಿದಂತೆ ನಾನು ಕೂಡ ರೈತರ ಕೃಷಿ ಮನ್ನಾ ಮಾಡುತ್ತೇನೆಂದು ಚುನಾವಣೆಯ ಸಂದರ್ಭದಲ್ಲಿ ಆಶ್ವಾಸನೆ ನಿಡಿದ್ದೆ.


ಪುಟ ↘ 2



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5730 |
| 85 ಕೆಡಿಎಂ (ಗ್ರಾಂ) | 5315 |



| ಬೆಳ್ಳಿ ಬೆಲೆ | |
|---|---|
| ಕೆಜಿ | 66000 |



## ಫಾಸ್ಟ್ ನ್ಯೂಸ್

### 16ರಂದು ಶ್ರೀ ಅಯ್ಯಪ್ಪಸ್ವಾಮಿ ಪಡಿಪೂಜೆ



» ದಾವಣಗೆರೆ

ನಗರದ ಎಂ.ಸಿ.ಸಿ 'ಬಿ' ಬ್ಲಾಕ್ ಬಿಐಇಟಿ ರಸ್ತೆಯಲ್ಲಿರುವ ಶ್ರೀ ಅಯ್ಯಪ್ಪಸ್ವಾಮಿ ನಾಳೆ ದಿನಾಂಕ 16ರ ಶನಿವಾರ ಮಂಡಲ ಪೂಜೆ, ದೀಪೋತ್ಸವ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. 16ರ ಬೆಳಿಗ್ಗೆ 5.30 ಕ್ಕೆ ಪಂಚ ದೇವರಿಗೆ ಪಂಚಾಮೃತ, ಶ್ರೀ ಅಯ್ಯಪ್ಪಸ್ವಾಮಿ ತುಪ್ಪದ ಅಭಿಷೇಕ, ಸಹಸ್ರ ನಾಮಾವಳಿ, ಪುಷ್ಪಾರ್ಚನೆ ಅಲಂಕಾರ, ಮಂತ್ರಪುಷ್ಪ, ಅಷ್ಟವರ್ಧನ ಮಹಾಗಣಪತಿ ಹೋಮ, ಮಹಾಮಂಗಳಾರತಿ ನಡೆಯಲಿದೆ. ನಂತರ ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ನಡೆಯಲಿದೆ. ಸಂಜೆ 5 ಕ್ಕೆ ಸಕಲ ವಾದ್ಯಗಳೊಂದಿಗೆ ಶ್ರೀ ಅಯ್ಯಪ್ಪಸ್ವಾಮಿ ಭವ್ಯ ಮೆರವಣಿಗೆ, ದೀಪಾರಾಧನೆ, ಪಡಿಪೂಜೆ ಮಂಗಳಾರತಿನಡೆಯಲಿದ್ದು,ಭಕ್ತಾದಿಗಳು ಆಗಮಿಸಿ, ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಅಯ್ಯಪ್ಪಸ್ವಾಮಿ ದೇವಸ್ಥಾನ ಸಮಿತಿಯವರು ವಿನಂತಿಸಿದ್ದಾರೆ.

### ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಮಹಿಳಾ ಘಟಕ ಉದ್ಘಾಟನೆ

» ಚಿತ್ರದುರ್ಗ

ಮಹಿಳಾ ಸಮಾನತೆಯ ಜೊತೆ ಜೊತೆಗೆ ಸಮ ಸಮಾಜ ಕಟ್ಟುವ ಕನಸು ಬಸವಾದಿ ಶರಣರದ್ದಾಗಿತ್ತು ಎಂದು ಜಾಗತಿಕ ಲಿಂಗಾಯಿತ ಮಹಾಸಭಾದ ಮಹಿಳಾ ಘಟಕದ ರಾಜ್ಯ ಸಂಚಾಲಕಿ ಶರಣೆ ಮುಕ್ತಾ ಕಾಗಿ ಹೇಳಿದರು.ನೀಲಕಂಠೇಶ್ವರ ಸಭಾಂಗಣದಲ್ಲಿ ಜಾಗತಿಕ ಲಿಂಗಾಯಿತ ಮಹಾಸಭಾ ಮಹಿಳಾ ಘಟಕ ಉದ್ಘಾಟಿಸಿ ಮಾತನಾಡಿದರು.ಬಸವಾದಿ ಶರಣರ ತಾತ್ವಿಕ ಚಿಂತನೆಗಳು ಇಂದಿನ ಸಂವಿಧಾನದ ಬೆಳಕು ವೈದಿಕ ಅಸಮಾನತೆಯ ವೈಭವೀಕರಣದಿಂದ ದೂರ ಸರಿದು ಸರ್ವರನ್ನು ಒಳಗೊಳ್ಳುವ ಲಿಂಗಾಯಿತ ಧರ್ಮವನ್ನು ಪರಿಕಲ್ಪಿಸಿ ಅನುಷ್ಠಾನಗೊಳಿಸಿದ್ದು, ಇವತ್ತಿನ ಎಲ್ಲಾ ಸಮಸ್ಯೆಗಳಿಗೆ ಬಸವಾದಿ ಶರಣರ ಪರಿಹಾರವಾಗಬಲ್ಲ ಈ ಧರ್ಮ ಇತರೆ ಧರ್ಮಗಳಿಗಿಂತ ವಿಭಿನ್ನ ಮತ್ತು ಅನನ್ಯವಾದ್ದರಿಂದ ಬೇರೆ ಧರ್ಮಗಳ ಪ್ರಭಾವದಿಂದ ಬಿಡುಗಡೆಗೊಳಿಸಿ ಸ್ವತಂತ್ರವಾಗಿಸಬೇಕಿದೆ ಎಂದರು.ಲಿಂಗಾಯಿತ ಧರ್ಮ ಸಂಸ್ಕೃತಿಯಂತೆ ಎಲ್ಲರೂ ನಡೆದರೆ ಮೀಸಲಾತಿ ಹೋರಾಟಗಳ ಪ್ರಶ್ನೆಯೆ ಬರುವುದಿಲ್ಲ. ಏಕೆಂದರೆ ಅಸಮಾನತೆಯ ಅನಿಷ್ಠಗಳ ವಿರುದ್ದದ ರಕ್ಷಣೆಯಾಗಿಯೇ ಇಂದಿನ ಮೀಸಲಾತಿ ಅನಿವಾರ್ಯ ಎಂದು ತಿಳಿಸಿದರು.ಸಾಹಿತಿ ಮತ್ತು ಸಂಸ್ಕೃತಿ ಚಿಂತಕ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಮಾತನಾಡಿ ಲಿಂಗಾಯಿತ ಸ್ವತಂತ್ರ ಧಾರ್ಮಿಕವಾಗಿ ಸಾಂವಿಧಾನಾತ್ಮಕವಾಗಿ ಘೋಷಿಸಲ್ಪಟ್ಟರೆ ಅಸಮಾನತೆಯ ಬೇರು ಬಿಳಿಲುಗಳನ್ನು ವಿಸ್ತರಿಸಿಕೊಳ್ಳುತ್ತ ನಡೆದು ಬರುತ್ತಿರುವ ವೈದ್ದಿಕ ಸಂಸ್ಕೃತಿಯನ್ನುಜನಪರಮತ್ತುಜೀವಪರಗೊಳಿಸುವ ಏಕೈಕ ಮಾರ್ಗವೆಂದರೆ ಬಸವಾದಿ ಶರಣರ ವಿಸ್ಮಯದ ನೆಲೆಯಲ್ಲಿ ಲಿಂಗಾಯಿತ ಧರ್ಮವನ್ನು ಅನುಷ್ಠಾನಗೊಳಿಸುವುದಾಗಿದೆ ಎಂದು ಹೇಳಿದರು. ಕೆಂಚವೀರಪ್ಪ ಅಧ್ಯಕ್ಷತೆ ವಹಿಸಿದ್ದರು.ಜಿಲ್ಲಾ ವೀರಶೈವ ಲಿಂಗಾಯಿತ ಮಹಾಸಭಾದ ಕೈಗಾರಿಕೋದ್ಯಮಿಗಳ ಪ್ರತಿನಿಧಿ ವೀಣ ಸುರೇಶ್, ನಿವೃತ್ತ ಉಪನ್ಯಾಸಕಿ ರೋಹಿಣಿ ಬಸವರಾಜ್, ಎ.ಬಿ.ಧನಂಜಯ, ಜಿ.ಎಂ.ಶಿವಾನಂದ್, ವೇದಿಕೆಯಲ್ಲಿದ್ದರು.

### 31 ನೇ ದಾವಣಗೆರೆ ಜಿಲ್ಲಾ ಮಟ್ಟದ ರಾಷ್ಟ್ರೀಯ ವಿಜ್ಞಾನ ಸಮಾವೇಶ ಇಂದು

» ದಾವಣಗೆರೆ

ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಜಿಲ್ಲಾ ಸಮಿತಿ, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಇವರ ಸಂಯುಕ್ತಾಶ್ರಾಯದಲ್ಲಿ ಡಿ.16 ರಂದು ಬೆಳಿಗ್ಗ 11 ಗಂಟೆಗೆ ಆನಗೋಡು ಬಳಿಯ ಹುಳುಪಿನ ಕಟ್ಟೆಯ ಉಪಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ 31 ನೇ ದಾವಣಗೆರೆ ಜಿಲ್ಲಾ ಮಟ್ಟದ ರಾಷ್ಟ್ರೀಯ ವಿಜ್ಞಾನ ಸಮಾವೇಶವನ್ನು ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಗೌರವಧ್ಯಕ್ಷರಾದ ಡಾ.ಜೆ.ಟಿ.ರಾಜ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಬಿ.ಐ.ಇ.ಟಿ ನಿರ್ದೇಶಕರಾದ ಪ್ರೊ.ವೈ.ವೃಷಭೇಂದ್ರಪ್ಪ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ.ಕೊಟ್ರೇಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವಿಜ್ಞಾನ ವಿಷಯ ಪರಿವೀಕ್ಷಕರಾದ ಆರ್.ಟಿ.ವಸಂತಕುಮಾರಿ, ಬಾಪೂಜಿ ಚೈಲ್ಡ್ ಹೆಲ್ತ್ ಇನ್ಸ್ಟಿಟ್ಯೂಟ್ & ರಿಸರ್ಚ್ ಸೆಂಟರ್‌ನ ಮಕ್ಕಳ ಮತ್ತು ನವಜಾತ ಶಿಶುಗಳ ತಜ್ಞೆ ಡಾ.ಮಾನಸ. ಕೆ.ಬಿ ಶಿವಮೊಗ್ಗದ ಆ್ಯಡ್ ಶಾಪ್ ಇ-ರಿಟೇಲ್ ರಾಘವೇಂದ್ರ.ಹೆಚ್ ಭಾಗವಹಿಸುವರು.

ಜಿಲ್ಲಾ ನ್ಯಾಯಾಧೀಶರಾದ ಗೀತಾ ಕೆ.ಬಿ. ಮಾಹಿತಿ

# ಅದಾಲತ್:1,06,421 ಪ್ರಕರಣಗಳು ಇತ್ಯರ್ಥ







» ಚಿತ್ರದುರ್ಗ

ಜಿಲ್ಲೆಯಲ್ಲಿ ಕಳೆದ ಡಿಸೆಂಬರ್ 9ರಂದು ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಚಾಲ್ತಿಯಲ್ಲಿದ್ದ ಒಟ್ಟು 3204 ಪ್ರಕರಣಗಳು ಮತ್ತು ವ್ಯಾಜ್ಯ ಪೂರ್ವ 1,06,421 ಪ್ರಕರಣಗಳನ್ನು ರಾಜೀ ಮುಖಾಂತರ ಇತ್ಯರ್ಥಪಡಿಸಲಾಗಿದ್ದು, ಇತ್ಯರ್ಥದ ಒಟ್ಟು ಮೊತ್ತ 17,36,39,597 ರೂ. ಆಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಬಿ.ಗೀತಾ ತಿಳಿಸಿದ್ದಾರೆ.ಈ ಬಾರಿ ನಡೆದ ಲೋಕ್ ಅದಾಲತ್‌ನಲ್ಲಿ ವಿಶೇಷವಾಗಿ 41 ಪಾಲು ವಿಭಾಗದ ಪ್ರಕರಣಗಳು, 80 ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, 200 ಚೆಕ್ ಬೌನ್ಸ್ ಪ್ರಕರಣ, 42 ಅಪರಾಧಿಕ ಕಾಂಪೌಂಡ್ ಪ್ರಕರಣಗಳು, 76 ಅಪಘಾತ ವಿಮಾ ಪ್ರಕರಣಗಳು, 14 ಕೌಟುಂಬಿಕ ಪ್ರಕರಣಗಳು, 144 ಅಮಲ್ ಜಾರಿ ಪ್ರಕರಣಗಳು, ಕರಾರಿಗೆ ಸಂಬಂಧಿಸಿದ 10 ದಾವೆಗಳು, ವಿವಿಧ ರೀತಿಯ 94 ಸಿವಿಲ್ ದಾವೆಗಳು, ಅಪರಾಧಿಕ ಕಾಂಪೌಂಡಬಲ್ ಪ್ರಕರಣಗಳು (ವಿವಿಧ ಅಪರಾಧಿಕ ಕಾಯ್ದೆ



ಅಡಿಯಲ್ಲಿ ದಾಖಲಾದ ಪ್ರಕರಣಗಳು) ಇತರೆ ಅಪರಾಧಿಕ ಕಾಯ್ದೆಗಳ ಸಾವಿರಕ್ಕೂ ಹೆಚ್ಚು ಪ್ರಕರಣಗಳು ಇತ್ಯರ್ಥವಾಗಿವೆ.

ಅಲ್ಲದೇ, ಈ ಬಾರಿಯ ಲೋಕ್ ಅದಾಲತ್‌ನಲ್ಲಿ ಒಟ್ಟು 9 ದಂಪತಿಗಳು, ಅಂದರೆ ಹಿರಿಯೂರು ನ್ಯಾಯಾಲಯದಲ್ಲಿ ಮೂರು ದಂಪತಿಗಳು, ಮೊಳಕಾಲ್ಮೂರು ನ್ಯಾಯಾಲಯದಲ್ಲಿ ಇಬ್ಬರು ಹಾಗೂ ಚಿತ್ರದುರ್ಗ, ಚಳ್ಳಕೆರೆ, ಹೊಳಲ್ಕೆರೆ, ಹೊಸದುರ್ಗ ನ್ಯಾಯಾಲಯದಲ್ಲಿ ತಲಾ ಒಂದು ದಂಪತಿ ತಮ್ಮ ವೈಮನಸ್ಸು ಬಿಟ್ಟು ಮತ್ತೆ ಒಂದಾಗಿದ್ದಾರೆ. ವಿಶೇಷವಾಗಿ ಸುಮಾರು 374 ಸಿವಿಲ್ ದಾವೆಗಳು ರಾಜಿಯಾಗಿರುತ್ತದೆ. ಅಲ್ಲದೇ 200 ಚೆಕ್ ಅಮಾನ್ಯ ಪ್ರಕರಣಗಳು ರಾಜಿಯಾಗಿದ್ದು, ಈ ಬಾರಿಯ ಲೋಕ್ ಅದಾಲತ್‌ನಲ್ಲಿ ಒಟ್ಟಾರೆ ಮೊತ್ತ ರೂ 17,36,39,597/- ಆಗಿರುತ್ತದೆ. ಮುಂಬರುವ ಲೋಕ್ ಅದಾಲತ್‌ನಲ್ಲಿ ಇನ್ನೂ ಹೆಚ್ಚು ಪ್ರಕರಣಗಳನ್ನು ರಾಜೀ ಮೂಲಕ ಬಗೆಹರಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಬಿ.ಗೀತಾ ಸಾರ್ವಜನಿಕರಿಗೆ ವಿನಂತಿಸಿದ್ದಾರೆ.

## ಬಸವ ಪುತ್ಥಳಿ; ಹಣ ದುರುಪಯೋಗವಾಗಿಲ್ಲ

» ಚಿತ್ರದುರ್ಗ

ಮುರುಘಾ ಮಠದ ಅಭಿವೃದ್ಧಿಯನ್ನು ಸಹಿಸದ ಮಾಜಿ ಸಚಿವ ಎಚ್.ಏಕಾಂತಯ್ಯ ಮಠದ ವಿಚಾರಗಳ ಬಗ್ಗೆ ಸುಖಾಸುಮ್ಮನೆ ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದಾರೆ. ಇಲ್ಲಿ ಯಾವುದೇ ಅನುದಾನ ದುರುಪಯೋಗವಾಗಿಲ್ಲ ಎಂದು ಮಠದ ಉಸ್ತುವಾರಿ ಶ್ರೀ ಬಸವಪ್ರಭು ಸ್ವಾಮೀಜಿ ಸ್ಪಷ್ಟಪಡಿಸಿದರು.

ಮುರುಘಾ ಮಠದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಬಸವ ಪುತ್ಥಳಿ ನಿರ್ಮಾಣದ ಯೋಜನೆಯಲ್ಲಿ ಹಣ ದುರುಪಯೋಗ ಆಗಿದೆ ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ಇಲ್ಲಿ ಯಾವುದೇ ಹಣ ದುರುಪಯೋಗ ಆಗಿಲ್ಲ.. ದ್ವೇಷದ ಮನೋಭಾವದಿಂದ ಈ ರೀತಿ ಮನವಿ ಸಲ್ಲಿಸಿದ್ದಾರೆ' ಎಂದರು.

'ಬರದ ಜಿಲ್ಲೆಯಲ್ಲಿ ಬಸವ ಪುತ್ಥಳಿ ನಿರ್ಮಾಣ ಮಾಡುವುದರಿಂದ ಪ್ರವಾಸೋದ್ಯಮ ಅಭಿವೃದ್ಧಿಯಾಗಲಿದೆ.ಪ್ರೇಕ್ಷಣೀಯಸ್ಥಳಮಾಡುವ ಉದ್ದೇಶವಿದೆ. ಬಸವ ಪುತ್ಥಳಿ ನಿರ್ಮಾಣದ ಯೋಜನೆ ಸುಮಾರು 10 ವರ್ಷಗಳಿಂದ ನಡೆಯುತ್ತಿದೆ. ಶ್ರೀಗಳ ಆಶಯದಂತೆ ಮಠದ ಹಿಂಭಾಗ 270 ಕೋಟಿ ರೂ ವೆಚ್ಚದಲ್ಲಿ 275 ಅಡಿ ಎತ್ತರದ ಪುತ್ಥಳಿ ನಿರ್ಮಾಣವಾಗುತ್ತಿದೆ. ಯೋಜನೆಯ ಕಾಮಗಾರಿ ಪ್ರಾರಂಭವಾಗಿದೆ' ಎಂದು ತಿಳಿಸಿದರು.

'ಪ್ರತಿಯೊಂದು ವೆಚ್ಚಕ್ಕೂ ರಸೀದಿಯಿದೆ. ಯಾವುದೇ ಹಣ ದುರುಪಯೋಗ ಆಗಿಲ್ಲ. ಕೆಲವರು ಅಪಪ್ರಚಾರ ಮಾಡುತ್ತಿದ್ದಾರೆ. ಇದಕ್ಕೆ



ಭಕ್ತರು ಕಿವಿಗೊಡಬಾರದು. ಜಿಲ್ಲಾಧಿಕಾರಿಗಳಿಗೆ ನೀಡಿರುವ ದೂರಿನ ಮೇರೆಗೆ ತಂಡ ಮಠಕ್ಕೆ ಬಂದಾಗ ಸಂಪೂರ್ಣ ಸಹಕಾರ ನೀಡಲಿದ್ದೇವೆ. ಈ ಯೋಜನೆ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಇದು ಶ್ರೀಗಳ ಕನಸು. ಇದನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವ ಮಾತಿಲ್ಲ. ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಲಿದ್ದೇವೆ. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು' ಎಂದು ಮನವಿ ಮಾಡಿದರು.

'ಸರ್ಕಾರ ಇದುವರೆಗೂ 35 ಕೋಟಿ ರೂ. ಬಿಡುಗಡೆ ಮಾಡಿತ್ತು, ಇದರಲ್ಲಿ 25 ಕೋಟಿ ರೂ.ಗಳನ್ನು ಇಗಾಗಲೇ ವೆಚ್ಚ ಮಾಡಲಾಗಿದೆ. ಇದಕ್ಕೆ ಎಲ್ಲಾ ರೀತಿಯ ರಸೀದಿಗಳು ಇವೆ. ಉಳಿದ 10 ಕೋಟಿ ಹಣ ಬ್ಯಾಂಕ್‌ನಲ್ಲಿದೆ. ಸರ್ಕಾರ ಬಿಡುಗಡೆ ಮಾಡಿದ ಹಣಕ್ಕೆ ನಾವುಗಳು ಉಪಯೋಗದ ರಸೀದಿಯನ್ನು ನೀಡಿದಾಗ ಮಾತ್ರ ಬಾಕಿ ಹಣವನ್ನು ಬಿಡುಗಡೆ ಮಾಡುತ್ತದೆ. ಅದೇ ರೀತಿ ನಾವು ಮಾಡಿದ್ದೇವೆ. ಸರ್ಕಾರವೂ ಸಹಾ ಅದೇ ರೀತಿಯಲ್ಲಿ ಹಣವನ್ನು ಬಿಡುಗಡೆ ಮಾಡಿದೆ. ಅಲ್ಲದೆ ಪ್ರತಿ 2-3 ತಿಂಗಳಿಗೊಮ್ಮೆ ಇಂಜಿನಿಯರ್‌ಗಳ ತಂಡವೊಂದು ಬಂದು ಕಾಮಗಾರಿ ಪರಿಶೀಲಿಸುತ್ತಿದೆ' ಎಂದರು.

ಕೆಡಿಪಿ ಸದಸ್ಯ ನಾಗರಾಜ್, ಮುಖಂಡರಾದ ಜಿತೇಂದ್ರ, ಪರಮೇಶ್ ಉಪಸ್ಥಿತರಿದ್ದರು.

## ನಾಯಕನಹಟ್ಟಿ ತಿಪ್ಪೇರುದ್ರ ಸ್ವಾಮಿಯ ಸಣ್ಣ ಕಾರ್ತಿಕೋತ್ಸವ



» ನಾಯಕನಹಟ್ಟಿ

ಚಿತ್ರದುರ್ಗ ಜಿಲ್ಲೆಯ ಮಧ್ಯ ಕರ್ನಾಟಕದ ಐತಿಹಾಸಿಕ ಶ್ರೀ ಗುರು ತಿಪ್ಪೇರುದ್ರ ಸ್ವಾಮಿಯ ಸಣ್ಣ ಕಾರ್ತಿಕೋತ್ಸವ ಶುಕ್ರವಾರ ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಆಚರಿಸಿದರು. ಮಧ್ಯಾಹ್ನ 3:00.ಗಂಟೆಗೆ ಪೂಜಾ ವಿಧಿ ವಿಧಾನಗಳಿಂದ ಸ್ವಾಮಿಯ ಉತ್ಸಾಹ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ಯುವಕರು,ಡೊಳ್ಳು ವ್ಯಾದಿಗಳನ್ನು, ಹಾಗೂ ನಂದಿ ಕೋಲುಗಳನ್ನು, ಕುಣಿಸುವ ಮೂಲಕ ಸಂಭ್ರಮದಿಂದ ಭಕ್ತರು ಹೆಜ್ಜೆ ಹಾಕಿದರು. ನಾಯಕನಹಟ್ಟಿ ಪಟ್ಟಣದ ದೇವರ ಗೂಳಿಯನ್ನು ವಿಶೇಷವಾಗಿ ಸಿಂಗಾರ ಮಾಡಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಶ್ರೀ ಗುರು ತಿಪ್ಪೇರುದ್ರ ಸ್ವಾಮಿಯ ಕಾರ್ಯನಿರ್ವಾಹಕ ಅಧಿಕಾರಿ ಹೆಚ್. ಗಂಗಾಧರಪ್ಪ ನಾಯಕನಹಟ್ಟಿ ಪಟ್ಟಣದ ಗ್ರಾಮಸ್ಥರು ಯುವಕರು ಭಕ್ತಾದಿಗಳು ಪೊಲೀಸ್ ಇಲಾಖೆಯವರು, ಇದ್ದರು.

## ಪ್ರೌಢಶಾಲಾ ವೃತ್ತಿ ಶಿಕ್ಷಣ ಶಿಕ್ಷಕರ ಸಂಘದಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಸಚಿವರಿಗೆ ಮನವಿ



» ಚಿತ್ರದುರ್ಗ

ಬೆಳಗಾವಿಯ ಸುವರ್ಣ ಸೌಧದಲ್ಲಿ ಹತ್ತು ದಿನಗಳ ಕಾಲ ನಡೆದ ವಿಧಾನಸಭೆ ಚಳಿಗಾಲದ ಅಧಿವೇಶನದಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಶಿಕ್ಷಕರ ಸಂಘದ ವತಿಯಿಂದ ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ಮುಖಾಂತರ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪನವರನ್ನು ಭೇಟಿ ಮಾಡಿ ರಾಜ್ಯದ 33 ಜಿಲ್ಲೆಗಳಲ್ಲಿ ಖಾಲಿಯಿರುವ ವೃತ್ತಿ ಶಿಕ್ಷಣ ವಿಷಯ ಪರಿವೀಕ್ಷಕರ ಹುದ್ದೆಗೆ ಬಡ್ತಿ ನೀಡುವುದು, ಜಿಲ್ಲಾ ಹಂತದಲ್ಲಿ ವೃತ್ತಿ ಶಿಕ್ಷಣ ಶಿಕ್ಷಕರು ಗ್ರೇಡ್-2, ವೃತ್ತಿ ಶಿಕ್ಷಣ ಶಿಕ್ಷಕರ ಜೇಷ್ಠತಾ ಪಟ್ಟಿ ಸಿದ್ದಪಡಿಸುವುದು. ಜೇಷ್ಠತೆ ಹಾಗೂ ರೋಸ್ಟರ್ ಪ್ರಕಾರ ಗ್ರೈಡ್-1 ವೃತ್ತಿ ಶಿಕ್ಷಣ ಶಿಕ್ಷಕರ ಹುದ್ದೆಗೆ ಬಡ್ತಿ, ವೇತನ ತಾರತಮ್ಯ ನಿವಾರಿಸುವಂತೆ ಮನವಿ ಸಲ್ಲಿಸಲಾಯಿತು. ಮನವಿ ಸ್ವೀಕರಿಸಿದ ಸಚಿವರು ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಆಯುಕ್ತರಾದ ಶ್ರೀಮತಿ ಬಿ.ಬಿ.ಕಾವೇರಿ ಈ ಸಂದರ್ಭದಲ್ಲಿದ್ದರು.

## ಉತ್ತರ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಬದ್ಧ

### ಪ್ರತ್ಯೇಕ ರಾಜ್ಯದ ಬೇಡಿಕೆ ಸಲ್ಲದು: ಅದು ಪರಿಹಾರವೂ ಅಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

» ಬೆಳಗಾವಿ

ಸರ್ಕಾರ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಬದ್ಧವಾಗಿದ್ದು, ಪ್ರತ್ಯೇಕ ರಾಜ್ಯದ ಬೇಡಿಕೆ ಸಲ್ಲದು ಹಾಗೂ ಅದು ತಾರತಮ್ಯ ನಿವಾರಣೆಗೆ ಪರಿಹಾರವೂ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಮಂಡಲದಲ್ಲಿ ಇಂದು ಉತ್ತರ ಕರ್ನಾಟಕದ ಮೇಲಿನ ಚರ್ಚೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು ಈ ಮಾತುಗಳನ್ನಾಡಿದರು.

ಪ್ರತ್ಯೇಕ ಕರ್ನಾಟಕಕ್ಕೆ ಒತ್ತಾಯ ಮಾಡುವುದು ಏಕೀಕರಣಕ್ಕೆ ಹೋರಾಡಿ, ಪ್ರಾಣ ತ್ಯಾಗ ಮಾಢಿದವರಿಗೆ ನಾವು ಮಾಡುವ ಅವಮಾನವಾಗಿದೆ ಏಕೀಕರಣಕ್ಕಾಗಿ ಬಹಳ ಜನ ಹೋರಾಡಿದರು. ಭಾಷಾವಾರು ಪ್ರಾಂತ್ಯ ರಚನೆಯಾಗಲೂ ವಾಗಲು ಹೋರಾಟ ಮಾಡಿದವರಿದ್ದಾರೆ. ಹೈದರಾಬಾದ್ ಕರ್ನಾಟಕಕ್ಕೆ 371 ಗೆ ತಿದ್ದುಪಡಿ ಆಗಿ 371



ಜೆ ಪರಿಚ್ಛೇದಕ್ಕಾಗಿ ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್, ವೈಜನಾಥ್ ಪಾಟೀಲ್ ಮುಂತಾದವರು ಹೋರಾಡಿದರು. ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ 2014 ಮತ್ತು 2017 ರಲ್ಲಿ ಉತ್ತರ ಕರ್ನಾಟಕದದ ಬಗ್ಗೆ ಚರ್ಚೆಯಾಗಿತ್ತು. ಒಮ್ಮೆ ಈ ಬಗ್ಗೆ ಎರಡು ಗಂಟೆಗಳಿಗೂ ಹೆಚ್ಚು ಕಾಲ ಉತ್ತರ ನೀಡಿದ್ದೆ ಎಂದು ಮುಖ್ಯಮಂತ್ರಿಗಳು ಸ್ಮರಿಸಿದರು.

ಅಭಿವೃದ್ಧಿಗಾಗಿಮೀಸಲಿಟ್ಟಅನುದಾನಖರ್ಚಾಗಿ ಅಭಿವೃದ್ಧಿಯಾಗಬೇಕು. ಕಿತ್ತೂರು ಕರ್ನಾಟದ 5 ತಾಲ್ಲೂಕುಗಳು ಸೇರಿದಂತೆ ಅತಿ ಹಿಂದುಳಿದ ಅತ್ಯಂತಹಿಂದುಳಿದತಾಲ್ಲೂಕುಗಳಿಗೂಅನುದಾನ ಕೊಡಲಾಗುವುದುಕಲ್ಯಾಣ ಕರ್ನಾಟಕಕ್ಕೆ 2013-14 ರಿಂದ ಈವರೆಗೆ 14877.36 ಕೋಟಿ ರೂ. ಗಳು ಮೀಸಲಿಡಲಾಗಿದೆ. ಬಿಡುಗಡೆಯಾಗಿದ್ದು 10280 ಕೋಟಿ ರೂ. ಹಾಗೂ 8330 ಕೋಟಿ ರೂ. ವೆಚ್ಚವಾಗಿದೆ. ಮುಂದಿನ ವರ್ಷದಿಂದ 5000 ಕೋಟಿ ರೂ.ಗಳನ್ನು ಕಲ್ಯಾಣ ಕರ್ನಾಟಕಕ್ಕೆ ನೀಡಲಾಗುವುದು. ಮುಂಬೈ ಕರ್ನಾಟಕದ ಹಿಂದುಳಿದ ತಾಲ್ಲೂಕುಗಳಿಗೂ ಅನುದಾನ ನೀಡಲಾಗುವುದು ಎಂದರು.

**ಪ್ರಮುಖ ಸುದ್ದಿ**

# ಕರ್ನಾಟಕದ ಅಭಿವೃದ್ಧಿಗೆ ಘೋಷಿಸಿದ ಹೊಸ ಘೋಷಣೆ

» ಮೊದಲ ಪುಟದಿಂದ

ಆದರೆ ಇದು ಸಾಧ್ಯವಿಲ್ಲ ಎಂಬುದು ಈಗ ಅರ್ಥವಾಗುತ್ತಿದೆ,ಸಾಲಮನ್ನಾಮಾಡಲು ಹಣ ಎಲ್ಲಿದೆ? ಎಂದು ವಿರೋಧ ಪಕ್ಷದ ಸದಸ್ಯರನ್ನೆ ಪ್ರಶ್ನಿಸಿದ್ದರು. " ರೈತರ ಸಾಲ ಮನ್ನಾ ಮಾಡಲು ನಾನು ಸಿದ್ಧನಿದ್ದೇನೆ. ಆದರೆ ಬೊಕ್ಕಸದಲ್ಲಿ ಹಣದ ಕೊರತೆ ಇದೆ. ಆದುದರಿಂದ ಸಾಲ ಮನ್ನಾ ಮಾಡಲು ಸಾಧ್ಯವಿಲ್ಲ" ಎಂದಿದ್ದರು ಜೊತೆಗೆ " ವಿಧಾನಸೌಧದಲ್ಲಿ ಕೂತು ನಾನು ನೋಟ್ ಪ್ರಿಂಟ್ ಮಾಡುತ್ತಿಲ್ಲ" . ಎಂದು ಉತ್ತರ ಹೇಳಿದ್ದರು.

3 ಉತ್ತರ ಕರ್ನಾಟಕದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಆರ್ಥಿಕತೆಗೆ ಉತ್ತೇಜನ ನೀಡಲು ಹಾಗೂ ಸ್ಥಳೀಯರಿಗೆ ಉದ್ಯೋಗ ಒದಗಿಸುವ ಸಲುವಾಗಿ *ಬೆಳಗಾವಿ ಸಮೀಪ ಸುಮಾರು 2000 ಎಕರೆ ಪ್ರದೇಶದಲ್ಲಿ ಹೊಸ ಕೈಗಾರಿಕಾ ಪ್ರದೇಶ, 500 ಎಕರೆ ಪ್ರದೇಶದಲ್ಲಿ ಫೌಂಡ್ರಿ ಕ್ಲಸ್ಟರ್ ಅನ್ನು ಸ್ಥಾಪಿಸಲಾಗುವುದು* ಹಾಗೂ ಜಿಲ್ಲೆಯಲ್ಲಿ ಏರೋಸ್ಪೇಸ್ ಆಧಾರಿತ ಕೈಗಾರಿಕೆಗಳ ಬೆಳವಣಿಗೆಗೆ ವಿಶೇಷ ಒತ್ತು ನೀಡಲಾಗುವುದು.

4 ಧಾರವಾಡ ಜಿಲ್ಲೆಯಲ್ಲಿ ಕೈಗಾರಿಕಾ ಕ್ಲಸ್ಟರ್ ಅನ್ನು ಸ್ಥಾಪಿಸಲಾಗುತ್ತಿದ್ದು, ಈಗಾಗಲೇ 19 ಘಟಕಗಳು ರೂ.1255 ಕೋಟಿ ಬಂಡವಾಳ ಹೂಡಿಕೆ ಮಾಡುತ್ತಿದ್ದು, ಸುಮಾರು 2450 ಜನರಿಗೆ ಉದ್ಯೋಗ ದೊರೆಯುವ ನಿರೀಕ್ಷೆ ಇದೆ*. ಅಲ್ಲದೇ, ಧಾರವಾಡದ ಸಮೀಪ ಸುಮಾರು 3000 ಎಕರೆ ಪ್ರದೇಶದಲ್ಲಿ ಹೊಸ ಕೈಗಾರಿಕಾ ಪ್ರದೇಶವನ್ನು ಸ್ಥಾಪಿಸಲಾಗುತ್ತದೆ.

5 ರಾಯಚೂರಿನಲ್ಲಿ ಹತ್ತಿ ಉತ್ಪಾದನೆಯು ಹೆಚ್ಚಿರುವುದರಿಂದ ಈ ಜಿಲ್ಲೆಯಲ್ಲಿ ಆರ್ಥಿಕ ಅಭಿವೃದ್ಧಿ ಹಾಗೂ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸುವ ದೃಷ್ಟಿಯಿಂದ ಹತ್ತಿ ಆಧಾರಿತ ಕೈಗಾರಿಕೆಗಳ ಸ್ಥಾಪನೆಗೆ ವಿಶೇಷ ಒತ್ತು ನೀಡಲಾಗುವುದು*.

6 ವಿಜಯಪುರದಲ್ಲಿ ಉತ್ಪಾದನಾ ಕ್ಲಸ್ಟರ್ ಅನ್ನು ಅಂದಾಜು 1500 ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗುವುದು.

7 ಉತ್ತರ ಕರ್ನಾಟಕವು ಸಮೃದ್ಧ ಪ್ರವಾಸೋದ್ಯಮಗಳ ತಾಣವಾಗಿದೆ. ಐತಿಹಾಸಿಕ ಮಹತ್ವವಿರುವ ಈ ತಾಣಗಳು ಅಂತರರಾಷ್ಟ್ರೀಯವಾಗಿಯೂ ಮಹತ್ವ ಪಡೆದಿವೆ. ಆದರೆ ಇದಕ್ಕೆ ಸಾಕಷ್ಟು ಮಹತ್ವ ನೀಡದೆ ಹಿನ್ನಡೆಯನ್ನು ಅನುಭವಿಸುತ್ತಿದೆ. ನಾವು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ *ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡಲು ಸಮಗ್ರ ಕ್ರಿಯಾಯೋಜನೆಯನ್ನು ರೂಪಿಸಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಕ್ರಮವಹಿಸುತ್ತೇವೆ*.

8 ಧಾರವಾಡದಲ್ಲಿರುವ ವಾಲ್ಮಿ [ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ] ಯನ್ನು ಉನ್ನತೀಕರಿಸಲಾಗುವುದು*. ಇದನ್ನು 'Centre of excellence for water management' ಯನ್ನಾಗಿ ಬದಲಾಯಿಸಿ ಇದರ ಮೂಲಕ ಜಲ ಶಿಕ್ಷಣ ನೀಡುವುದಷ್ಟೆ ಅಲ್ಲ, ಉತ್ತರ ಕರ್ನಾಟಕದ ಮಣ್ಣಿನ ಸವುಳು-ಜವುಳು ಸಮಸ್ಯೆಯನ್ನು ನಿರ್ವಹಿಸಲಾಗುವುದು. ಹಾಗೂ ರೈತರ ಆದಾಯ ಹೆಚ್ಚಳದ ಕಡೆಗೆ ಒತ್ತು ನೀಡಲಾಗುವುದು.

## ಫಾಸ್ಟ್ ನ್ಯೂಸ್

### ನಾಳೆ ಶ್ರೀ ಭಗೀರಥ ರಥಯಾತ್ರೆ ಆಗಮನ

» **ಚಿತ್ರದುರ್ಗ**

ಚಿತ್ರದುರ್ಗ ನಗರಕ್ಕೆ ಡಿ. 17ರಂದು ಶ್ರೀ ಭಗೀರಥ ಭಾರತ ಜನ ಕಲ್ಯಾಣ ರಥ ಯಾತ್ರೆ ಆಗಮಿಸಲಿದೆ ಎಂದು ಶ್ರೀ ಭಗೀರಥ ಜಿಲ್ಲಾ ಉಪ್ಪಾರ ಸಂಘದ ಗೌರವಾಧ್ಯಕ್ಷರಾದ ಎಸ್.ನಾಗರಾಜ್ ತಿಳಿಸಿದ್ದಾರೆ. ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು, ಹರೀಶ್ ಮೆಹತೊ ಚೌಹಾಣ್ ಮತ್ತು ತಂಡದ ನೇತೃತ್ವದಲ್ಲಿ ಯಾತ್ರೆ ಪ್ರಾರಂಭವಾಗಿದ್ದು, ಈಗಾಗಲೇ ನೆರೆ ರಾಜ್ಯಗಳಾದ ಆಂಧ್ರಪ್ರದೇಶ್,ತೆಲಂಗಾಣ, ಮಹಾರಾಷ್ಟ್ರ,ಗುಜರಾತ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಸಂಚಾರ ಮಾಡಿ ಡಿ.9 ರಂದು ಕರ್ನಾಟಕ ರಾಜ್ಯವನ್ನು ಪ್ರವೇಶ ಮಾಡಿದೆ ಅಲ್ಲಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಯಾತ್ರೆ ಸಂಚಾರ ಮಾಡಿ ಡಿ. 17 ರಂದು ಚಿತ್ರದುರ್ಗ ಜಿಲ್ಲೆಯನ್ನು ಪ್ರವೇಶ ಮಾಡಲಿದ್ದು, 2024ರ ಫೆಬ್ರವರಿ ವೇಳೆಗೆ ನವದೆಹಲಿಯ ರಾಮಲೀಲಾ ಮೈದಾನವನ್ನು ತಲುಪಲಿದೆ ಎಂದರು.ಉಪ್ಪಾರ ಸಮಾಜವನ್ನು ಸಂಘಟಿಸುವುದು ಮತ್ತು ಒಗ್ಗೂಡಿಸುವುದು, ಸಮುದಾಯದ ಜನರಿಗೆ ಜಾಗೃತಿಯನ್ನು ಮೂಡಿಸುವುದು, ಶ್ರೀ ಭಗಿರಥ ಜಯಂತಿಯನ್ನು ಕರ್ನಾಟಕದ ಜೊತೆಗೆ ದೇಶದ್ಯಾಂತ ಆಚರಿಸಲು ಆದೇಶಿಸುವಂತೆ ಕೇಂದ್ರ ಸರ್ಕಾರಕ್ಕೆ ಹಕ್ಕೋತ್ತಾಯ ಮಂಡಿಸುವುದು, ಉಪ್ಪಾರ ಸಮಾಜವನ್ನು ಎಸ್.ಸಿ. ಅಥವಾ ಎಸ್.ಟಿ.ಗೆ ಸೇರ್ಪಡೆಗೆ ಶೀಪಾರಸ್ಸು ಮಾಡಲು ರಾಜ್ಯ ಸರ್ಕಾರಗಳಿಗೆ ಮತ್ತು ಕೇಂದ್ರ ಸರ್ಕಾರಕ್ಕೆ ಒತ್ತಡವನ್ನು ಹಾಕುವುದು ವಿವಿಧ ಹೆಸರಿನಲ್ಲಿ ಕರೆಯಲ್ಪಡುವ ಉಪ್ಪಾರ ಸಮಾಜವನ್ನು ಭಗೀರಥ ಅಥವಾ ಉಪ್ಪಾರ್ ಎಂಬ ಒಮದೇ ಹೆಸರಿನ ಸೂರಿನ ಅಡಿಯಲ್ಲಿ ತಂದು ಸಂಘಟಿಸುವುದು ಯಾತ್ರೆಯ ಮುಖ್ಯ ಉದ್ದೇಶವಾಗಿದೆ ಇದ್ದಲ್ಲದೆ ಶ್ರೀ ಭಗೀರಥ ಸಮಾಜ ಅಭೀವೃದ್ದಿ ನಿಗಮ ಸ್ಥಾಪಸಿ ವಾರ್ಷಿಕ ಅನುದಾನ ನೀಡುವಂತೆ ಒತ್ತಾಯಿಸ ಲಾಗುವುದೆಂದು ಎಂದು ನಾಗರಾಜ್ ತಿಳಿಸಿದರು.ಡಿ.17 ರ ಮದ್ಯಾಹ್ನ ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಪಕ್ಕದ ಯೂನಿಯನ್ ಪಾರ್ಕನಿಂದ ರಥ ಯಾತ್ರೆ ಪ್ರಾರಂಭವಾಗಲಿದ್ದು, ಸಂತೇಪೇಟೆ, ಬಿ.ಡಿ.ರಸ್ತೆ, ಕಿತ್ತೂರುರಾಣಿ ಚನ್ನಮ್ಮ ವೃತ್ತ, ಮಹಾವೀರ ವೃತ್ತ, ವಾಸವಿ ವೃತ್ತ, ಗಾಯತ್ರಿ ವೃತ್ತದ ಮೂಲಕ ಉಮಾಪತಿ ಕಲ್ಯಾಣ ಮಂಟಪ ತಲುಪಲಿದೆ, ಈ ಸಮಯದಲ್ಲಿ ವಿವಿಧ ಜಾನಪದ ಕಲಾಮೇಳಗಳು, ಪೂರ್ಣ ಕುಂಭದೊಂದಿಗೆ ರಥಯಾತ್ರೆಯನ್ನು ಸ್ವಾಗತಿಸಲಾಗುವುದು. ಈ ರಥಯಾತ್ರೆಯ ಮೆರವಣಿಗೆಯ ನೇತೃತ್ವವನ್ನು ಹೊಸದುರ್ಗ ತಾಲ್ಲೂಕಿನ ಬಿ.ವಿ.ನಗರದ ಭಗೀರಥ ಪೀಠದ ಶ್ರೀ ಡಾ.ಪುರೋಷತ್ತಮಾನಂದ ಶ್ರೀಗಳು ವಹಿಸಲಿದ್ದಾರೆ. ಅಂದಿನ ಮೆರವಣಿಗೆಯ ನಂತರ ಉಮಾಪತಿ ಕಲ್ಯಾಣ ಮಂಟಪದಲ್ಲಿ ಸಭಾ ಕಾರ್ಯಕ್ರಮ ನಡೆಯಲಿದೆ. ಅಂದಿನ ಕಾರ್ಯಕ್ರಮಕ್ಕೆ ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಮಾಜ ಭಾಂದವರು ಆಗಮಿಸುವುದರ ಮೂಲಕ ಮೆರವಣಿಗೆ ಮತ್ತು ಸಭೆಯನ್ನು ಯಶಸ್ವಿಗೂಳಿಸುವಂತೆ ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಶ್ರೀ ಭಗೀರಥ ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷರಾದ ಎನ್.ವಿರೇಶ್, ಪ್ರದಾನ ಕಾರ್ಯದರ್ಶಿ ಎಲ್.ಮಹೇಶ್, ಮಾಜಿ ಅಧ್ಯಕ್ಷರಾದ ಆರ್, ಮೂರ್ತಿ, ಖಂಜಾಚಿ ಹೆಚ್. ಅಂಜಪ್ಪ, ಚಿತ್ರದುರ್ಗ ತಾ.ಅಧ್ಯಕ್ಷ ಸಿದ್ದಪ್ಪ, ಕಾರ್ಯದರ್ಶಿ ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಬಾಯ್ಲರ್ ರವಿ, ಸಲಹೆಗಾರರಾದ ಬಸವರಾಜು ಮತ್ತು ವೆಂಕಟೇಶ್ ಹಾಜರಿದ್ದರು.

### ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ

» **ಚಿತ್ರದುರ್ಗ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಡಿ.22 ಅರ್ಜಿ ಸಲ್ಲಿಸಲು ಕೊನೆಯ ದಿನ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್.ಸಿ, ಎಸ್.ಟಿ ರೂ.2.50 ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ.1 ಲಕ್ಷ ಆದಾಯ ಮಿತಿ ಹೊಂದಿರಬೇಕು. ವಿದ್ಯಾರ್ಥಿಗಳು https//shp.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https//bcwd.karnataka.gov.in/ ನ್ನು ನೋಡಬಹುದು.

### ಸಾವರಿನ್ ಗೋಲ್ಡ್ ಬಾಂಡ್ ಹೂಡಿಕೆ ಸೇವೆ

» **ದಾವಣಗೆರೆ**

ಕೇಂದ್ರ ಸರ್ಕಾರದ ಪರವಾಗಿ RBI ನೀಡುವ ಸಾವರಿನ್ ಗೋಲ್ಡ್ ಬಾಂಡ್ ಹೂಡಿಕೆ ಯೋಜನೆಯು ಭದ್ರತೆಯನ್ನು ಖಾತ್ರಿಪಡಿಸುವುದು ಮಾತ್ರವಲ್ಲದೇ ಲಾಭದಾಯಕ ಆದಾಯ ಗಳಿಸಲು ಸಹಕಾರಿಯಾಗಿದ್ದು, ಸಾರ್ವಜನಿಕರು ಹೂಡಿಕೆ ಮಾಡಲು ಡಿ. 18 ರಿಂದ 22 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿ ಅಥವಾ ಜಿಲ್ಲಾ ಪ್ರಧಾನ ಅಂಚೆ ಕಚೇರಿ ಮಾರುಕಟ್ಟೆ ಅಧಿಕಾರಿ ಸಂತೋಷ್.ಬಿ (ಮೊ.ಸಂ. 8861126883) ಸಂಪರ್ಕಿಸಿ.

# ಅತಿಥಿ ಉಪನ್ಯಾಸಕರ ಸಮಸ್ಯೆ ಬಗೆಹರಿಸಿ: ಎಬಿವಿಪಿ

» **ಚಿತ್ರದುರ್ಗ**

ರಾಜ್ಯ ಸರ್ಕಾರ ಅತಿಥಿ ಉಪನ್ಯಾಸಕರ ಸಮಸ್ಯೆಗಳನ್ನು ಬಗೆಹರಿಸಿ ತರಗತಿಗಳು ಸುಗಮವಾಗಿ ನಡೆಯುವಂತೆ ಕ್ರಮವಹಿಸಬೇಕು ಎಂದು ಆಗ್ರಹಿಸಿ ಎಬಿವಿಪಿ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿ ಕಳೆದ ಕೆಲವು ದಿನಗಳಿಂದ ಅತಿಥಿ ಉಪನ್ಯಾಸಕರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ಮಾಡುತ್ತಿದ್ದಾರೆ. ಇದರಿಂದಾಗಿ ಪದವಿ ಕಾಲೇಜುಗಳಲ್ಲಿ ಸರಿಯಾಗಿ ತರಗತಿಗಳು ನಡೆಯದೆ ವಿದ್ಯಾರ್ಥಿಗಳ ಪಠ್ಯ ಚಟುವಟಿಕೆಗಳಲ್ಲಿ ಹಿನ್ನಡೆ ಆಗುತ್ತಿದೆ. ಕೆಲವೊಂದು ವಿಶ್ವ ವಿದ್ಯಾಲಯಗಳು ಸೆಮಿಸ್ಟರ್ ಪರೀಕ್ಷೆಯನ್ನು ನಡೆಸುವ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿವೆ. ಆದರೆ ತರಗತಿಗಳು ಸರಿಯಾಗಿ ನಡೆಯದೆ ವಿದ್ಯಾರ್ಥಿಗಳು ಹೇಗೆ ಪರೀಕ್ಷೆ ಬರೆಯಬೇಕು ಎಂಬ ಪ್ರಶ್ನೆ ವಿದ್ಯಾರ್ಥಿ ಸಮುದಾಯದ ಮಧ್ಯೆ ಮೂಡುತ್ತಿದೆ ಎಂದರು.







ಅತಿಥಿ ಉಪನ್ಯಾಸಕರ ಬೇಡಿಕೆಗಳನ್ನು ಈಡೇರಿಸಿ ಗೌರವಯುತ ಜೀವನವನ್ನು ಸಾಧ್ಯವಾಗಿಸುವುದು ಸರ್ಕಾರದ ಕರ್ತವ್ಯವಾಗಿದೆ. ರಾಜ್ಯ ಸರ್ಕಾರವು ಈ ವಿಷಯದಲ್ಲಿ ಯಾವುದೇ ರೀತಿ ವಿಳಂಬ ಮಾಡದೆ ಅತಿಥಿ ಉಪನ್ಯಾಸಕರಿಗೆ ಸರ್ಕಾರಿ ನೌಕರರಿಗೆ ನೀಡುವ ಹಾಗೆ ಪ್ರತಿ ತಿಂಗಳು ನೀಡಬೇಕು ಎಂದು ಆಗ್ರಹಿಸಿದರು.

ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಸರ್ಕಾರ ಕೂಡಲೇ ರಾಜ್ಯದ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕ ಹುದ್ದೆಯನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಆರಂಭಿಸಬೇಕು. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೂಡಲೇ ತರಗತಿ ಬಹಿಷ್ಕಾರವನ್ನು ಹಿಂಪಡೆದು ಪಾಠ ಪ್ರವಚನಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಸುದರ್ಶನ್ ನಾಯ್ಕ, ಕನಕರಾಜ್ ಕೋಡಿಹಳ್ಳಿ, ಸಿದ್ದೇಶ್, ಗೋಪಿ, ಚಿತ್ರಸ್ವಾಮಿ, ಚೈತ್ರ, ಮನೋಜ್, ಅಜ್ಜಯ್ಯ, ಚಂದನ, ಸುಮನ್, ದರ್ಶನ್, ತಿಪ್ಪೇಸ್ವಾಮಿ, ಸುದೀಪ್, ಮಧು, ಲಕ್ಷ್ಮೀ ಭಾಗವಹಿಸಿದ್ದರು.

### ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ನೂರು ದಿನಗಳ ಓದುವ ಆಂದೋಲನ ಕಾರ್ಯಕ್ರಮ

# ಓಂಕಾರ ನಗರ ಶಾಲೆಯ ವಿದ್ಯಾರ್ಥಿಗಳಿಗೆ ಕನ್ನಡ ಕವಿ, ಸಾಹಿತಿಗಳ ಹೆಸರಿನ ಜತೆ ವೇಷಭೂಷಣ

» **ಮಹದೇವಪುರ ಶಿವಮೂರ್ತಿ**

ಪರಶುರಾಂಪುರ: ವಿದ್ಯಾರ್ಥಿಗಳು ಶಾಲಾ ಸಮವಸ್ತ್ರದಿಂದಿರುವುದು ಸರ್ವೆಸಾಮಾನ್ಯ ಆದರೆ ಇಲ್ಲಿ ಈ ವಿದ್ಯಾರ್ಥಿಗಳು ಖ್ಯಾತ ಕನ್ನಡದ ಸಾಹಿತಿ ಹಾಗೂ ಕವಿಗಳ ವೇಷಾಭೂಷಣದಲ್ಲಿ ಇಲ್ಲಿನ ಶಾಲಾ ಆವರಣ ತುಂಬಿತ್ತು.

ಪರಶುರಾಂಪುರ ಹೋಬಳಿಯ ಪಿ.ಓಬನಹಳ್ಳಿಯ ಓಂಕಾರ ನಗರದ ಶಾಲೆಯಲ್ಲಿ ಶುಕ್ರವಾರ ನಡೆದ ಓದುವ ಆಂದೋಲನದ ಚಟುವಟಿಕೆಯಲ್ಲಿ ಕಂಡು ಬಂದ ದೃಶ್ಯಗಳು .

ಸ.ಕಿ.ಪ್ರಾ. ಶಾಲೆಯ ಮಕ್ಕಳಿಗೆ ಕನ್ನಡದ ರಾಷ್ಟ್ರ ಕವಿ ಹಾಗೂ ಸಾಹಿತಿಗಳ ವಿವಿಧ ಹೆಸರುಗಳನ್ನು ಇಡಲಾಯಿತು. ವಿದ್ಯಾಥಿಗಳಿಗೆ ಸಾಹಿತಿಗಳ ಮತ್ತು ಕವಿಗಳ ಹೆಸರಿಡುವ ಮೂಲಕ ಇಲ್ಲಿನ ಶಿಕ್ಷಕರು ಮಕ್ಕಳಲ್ಲಿ ಕನ್ನಡ ಸಾಹಿತ್ಯದ ಕುರಿತು ಆಸಕ್ತಿ ಮೂಡಿಸುತ್ತಿದ್ದಾರೆ.

ಪುಟಾಣಿಗಳನ್ನು ಸಾಹಿತಿಗಳ ಹೆಸರಲ್ಲಿ ಇತರರು ಕರೆದು ಎಲ್ಲರ ಬಾಯಲ್ಲಿ ಸಾಹಿತಿಗಳ ಹೆಸರು ಹರಿದಾಡಿ ಸಾಹಿತಿ ಮತ್ತು ಸಾಹಿತ್ಯದ ಕುರಿತು ಅಭಿರುಚಿ ಹೆಚ್ಚಿಸುತ್ತದೆ. ಸ್ವತಃ ವಿದ್ಯಾರ್ಥಿಗಳು, ಆಪ್ತರು ಸಾಹಿತಿಗಳ ಹಿನ್ನೆಲೆ, ಹುಟ್ಟೂರು ಇತ್ಯಾದಿ ಅಂಶಗಳನ್ನು ತಿಳಿದುಕೊಳ್ಳಲು ಅನುಕೂಲವಾಗುತ್ತದೆ ಎನ್ನುವುದು ಶಿಕ್ಷಕರ ಉದ್ದೇಶ.

ಅಷ್ಟೆ ಅಲ್ಲ, ವಿದ್ಯಾರ್ಥಿಗಳಿಗೆ ವಿವಿಧ ರಾಜ್ಯಗಳ ಹೆಸರುಗಳನ್ನು ಇರಿಸಲಾಗಿದೆ. ಪ್ರತಿ ದಿನ ಪ್ರಾರ್ಥನೆ ವೇಳೆ ಹೆಸರಿನ ರಾಜ್ಯಗಳ ವಿಶೇಷತೆಗಳನ್ನು ಶಿಕ್ಷಕರು ವಿದ್ಯಾರ್ಥಿಗಳ ಮೂಲಕ ಹೇಳಿಸುತ್ತಿದ್ದಾರೆ. ಪುಟ್ಟ ವನದಲ್ಲಿರುವ ಈ ಸರಕಾರಿ ಶಾಲೆಯಲ್ಲಿ ಸಾಹಿತಿಗಳ, ಕವಿಗಳ ಪರಿಸರ ಪಾಠ, ರಾಜ್ಯಗಳ ವಿಶೇಷತೆಗಳ ಅರಿವಿನ ಅಭಿಯಾನ ನಡೆಸುತ್ತಿರುವ ಇಲ್ಲಿನ ಶಿಕ್ಷಕರ ಕಾರ್ಯ ಮಾದರಿ ಎನಿಸಿದೆ ಎಂದು ವಿದ್ಯಾರ್ಥಿಗಳ ಪೋಷಕರು ತಿಳಿಸಿದರು.



> ಓದುವ ಆಂದೋಲನದ ಕಾರ್ಯಕ್ರಮದಡಿ ಮಕ್ಕಳ ಮೇಲೆ ನಾಡು , ನುಡಿಯ ಜತೆ ಸಾಹಿತಿ ಬಗ್ಗೆ ತಿಳಿಯುವುದರ ಜತೆ ಜ್ಞಾನ ಹೆಚ್ಚಿಸಲು ಕಾರಣವಾಗುತ್ತದೆ
> » **ಆರ್. ಕಮಲಮ್ಮ ಮುಖ್ಯ ಶಿಕ್ಷಕಿ**

**ಶಾಲೆಯಲ್ಲಿ ವಿಶಿಷ್ಟ ಪ್ರಯತ್ನ:** ಈ ಶಾಲೆಯಲ್ಲಿ ಇಲಾಖೆಯ ಯಾವುದೇ ಕಾರ್ಯಕ್ರಮದ ಆದೇಶ ಜತೆ ಪಠ್ಯದ ಹಾಗೂ ಪಠ್ಯೇತರ ಚಟುವಟಿಕೆಗಳನ್ನ ವಿಭಿನ್ನ ಹಾಗೂ ವಿಶಿಷ್ಟವಾಗಿ ಕಾರ್ಯರೂಪಕ್ಕೆ ತರಲು ಇಲ್ಲಿನ ಶಿಕ್ಷಕಿಯರ ಶ್ರಮ ಉತ್ತಮವಾಗಿದೆ ಎಂದೆನ್ನುವರು ಸ್ಥಳೀಯರು.ಶಾಲೆ ಯಲ್ಲಿ ಮಕ್ಕಳಿಲ್ಲದೆ ಮುಚ್ಚುವ ಭೀತಿಯೂ ಎದುರಾಗಿತ್ತು. ಅಂತಹ ಶಾಲೆಯನ್ನು ಉಳಿಸುವ ಪ್ರಯತ್ನಕ್ಕೆ ಗ್ರಾಮಸ್ಥರು ಮುಂದಾಗಿದ್ದರು. ಈಗ ಶಿಕ್ಷಕರ ಪ್ರಯೋಗ ಮಕ್ಕಳನ್ನು ಶಾಲೆಯತ್ತ ಆಕರ್ಷಿಸುವಂತೆ ಮಾಡಿದೆ. ಪ್ರತಿಯೊಬ್ಬರು ಲಲಿತಾ ನಾಯಕ್ , ನಾಗಭೂಷಣ್ , ತ್ರಿವೇಣಿ , ಸುಧಾಮೂರ್ತಿ , ಆಯ್ದಕ್ಕಿ ಲಕ್ಕಮ್ಮ , ವೈದೇಹಿ, ಇಂದಿರಾ , ಅಕ್ಕಮಹಾದೇವಿ , ಕುವೆಂಪು, , ಪಂಪಾ, ಶಿಶುನಾಳ ಷರೀಪ , ಕನಕದಾಸರು , ಬಸವಣ್ಣ, ಸವ9ಜ್ಞ, ಪುರಂದರದಾಸರು , ಜೇಡರ ದಾಸಿಮಯ್ಯ , ವೆಂಕಟೇಶ ಮೂರ್ತಿ, ಅಂಬಿಗರ ಚೌಡಯ್ಯ ಹೀಗೆ ಸಾಹಿತಿಗಳ ಹೆಸರಿಡಲಾಗಿದೆ. ವಿವಿಧ ರಾಜ್ಯಗಳ ಹೆಸರನ್ನು ಇರಿಸಿ ಕರೆಯಲಾಯಿತು.

**ಜ್ಞಾನ ಹೆಚ್ಚಳ ಪ್ರಯತ್ನ:** ಇಲಾಕೆಯ ಆದೇಶಗಳ ಪಾಲನೆಯೊಂದಿಗೆ ಚಟುವಟಿಕೆಗಳ ಮೂಲಕ ಮಕ್ಕಳು ಸ್ವತಃ ಅನುಭವಿಸಿ, ಅರಿತುಕೊಳ್ಳುವುದಲ್ಲದೆ ಮಕ್ಕಳ ಹೆಸರನ್ನು ಕರೆಯುವ ವ್ಯಕ್ತಿಯಲ್ಲೂ ಕನ್ನಡ ನಾಡು  ನುಡಿ, ಸಾಹಿತ್ಯ, ಕವಿಗಳ ಬಗ್ಗೆ ಅರಿಯಲು ಕಾರಣವಾಗುತ್ತದೆ. ಜ್ಞಾನವೂ ಹೆಚ್ಚುತ್ತದೆ ಎನ್ನುವ ಉದ್ದೇಶದಿಂದ ಈ ಪ್ರಯತ್ನ ಎನ್ನುತ್ತಾರೆ ಶಿಕ್ಷಕಿ ಆಶಾ.

### ಕುದಾಪುರದ ಡಿಆರ್‌ಡಿಒ ಕೇಂದ್ರದಲ್ಲಿ ಬಾಲರಹಿತ ಸಂರಚನೆಯ ಡೆಮಾನ್ ಸ್ಟ್ರೇಟರ್ ಯಶಸ್ವಿ ಹಾರಾಟ :

# ಫ್ಲೈಯಿಂಗ್‌ವಿಂಗ್ ಕಾನ್ಫಿರೇಷನ್ ನಿಯಂತ್ರಣ ಭಾರತದ ವಿಕ್ರಮ



» **ಚಳ್ಳಕೆರೆ**

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಕುದಾಪುರದ ಡಿಆರ್‌ಡಿಒದಲ್ಲಿ ಬಾಲರಹಿತ ಸಂರಚನೆಯಲ್ಲಿರುವ ಡೆಮಾನ್ ಸ್ಟೇಟರ್ ಯಶಸ್ವಿ ಹಾರಾಟ ನಡೆಸುವ ಮೂಲಕ ಭಾರತ ಫ್ಲೈಯಿಂಗ್‌ವಿಂಗ್ ಕಾನ್ಫಿಗರೇಷನ್ ನಿಯಂತ್ರಣ ಕರಗತ ಮಾಡಿಕೊಂಡ ದೇಶಗಳ ಸಾಲಿಗೆ ಭಾರತವು ಸೇರ್ಪಡೆಯಾಗಿದ್ದು ಈ ಸಂತಸ ಕ್ಷಣವನ್ನು ಡಿಆರ್‌ಡಿಒ ಟ್ವೀಟರ್(ಎಕ್ಸ್) ಮೂಲಕ ಸಾರ್ವಜನಿಕವಾಗಿ ಹಂಚಿಕೊಂಡಿದೆ.

ಕುದಾಪುರ ಗ್ರಾಮದ ಏರೋನಾಟಿಕಲ್ ಟೆಸ್ಟ್‌ರೇಂಜ್(ಎಟಿಆರ್)ನಲ್ಲಿ ಶುಕ್ರವಾರ ಯಶಸ್ವಿ ಪ್ರಯೋಗನಡೆಸಲಾಯಿತು. ಸ್ಥಳೀಯ ಹೈಸ್ಪೀಡ್ ಫ್ಲೈಯಿಂಗ್‌ವಿಂಗ್(ಯುಎವಿ) ಆಟೋನಮಸ್ ಫ್ಲೈಯಿಂಗ್‌ವಿಂಗ್ ಟೆಕ್ನಾಲಜಿ ಡೆಮಾನ್‌ಸ್ಟ್ರೇಟರ್ ಹಾರಾಟ ಯಶಸ್ವಿಯಾಗಿ ನಡೆಯಿತು. ಡಿಆರ್‌ಡಿಒ ಕೇಂದ್ರದಲ್ಲಿ ಪ್ರಯೋಗ ಯಶಸ್ವಿಯಾದ ಕೂಡಲೇ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಸಂತಸದ ಕ್ಷಣಗಳನ್ನು ಹಂಚಿಕೊಂಡರು.

# ವೃತ್ತಿ ಶಿಕ್ಷಣ ಕಲಿಕೋತ್ಸವ ಹಾಗೂ ವಸ್ತು ಪ್ರದರ್ಶನಕ್ಕೆ ಚಾಲನೆ

» **ಚಿತ್ರದುರ್ಗ**

ಮಕ್ಕಳನ್ನು ಕೇವಲ ಪಠ್ಯಪುಸ್ತಕ ಅಂಕಕ್ಕೆ ಸೀಮಿತಗೊಳಿಸದೆ ಜೀವನಕ್ಕೆ ಬೇಕಾಗಿರುವ ಕೌಶಲ್ಯಾಧಾರಿತ ಶಿಕ್ಷಣ ನೀಡುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ ಕರೆ ನೀಡಿದರು.

ಮಹಾರಾಣಿ ಪದವಿಪೂರ್ವ ಕಾಲೇಜಿನಲ್ಲಿ ನಡೆದ ವೃತ್ತಿ ಶಿಕ್ಷಣ ಕಲಿಕೋತ್ಸವ ಹಾಗೂ ವಸ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು.

ವೃತ್ತಿ ಶಿಕ್ಷಕರು ಮಕ್ಕಳ ಮೂಲಕ ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಬೇಕು. ವಿಷಯಾಧಾರಿತ ಶಿಕ್ಷಕರುಗಳಿಗಿರುವಷ್ಟೆ ಗೌರವ, ಜವಾಬ್ದಾರಿ ನಿಮಗೂ ಇರುವುದರಿಂದ ಮಕ್ಕಳನ್ನು ಸ್ವಾವಲಂಭಿಗಳಾಗಿ ಬದುಕುವತ್ತ ಸಿದ್ದಗೊಳಿಸಬೇಕು.

ಮಕ್ಕಳ ಮನಸ್ಸು ಅಂಗಾಂಗ ವೃತ್ತಿ ಕೌಶಲ್ಯದ ಕಾರ್ಯವಾಗಬೇಕು. ಕೌಶಲ್ಯ ಶಿಕ್ಷಣದಿಂದ ಮಕ್ಕಳಲ್ಲಿ ಮಾನಸಿಕ ದೈಹಿಕ ಸಾಮರ್ಥ್ಯ ಬೆಳೆಯುತ್ತದೆ. ಕೇವಲ ಗಣಿತ, ವಿಜ್ಞಾನ, ಇಂಗ್ಲಿಷ್ ಭಾಷೆಗಳಲ್ಲದೆ ವೃತ್ತಿ ಶಿಕ್ಷಣ ಕಲಿತ ವಿದ್ಯಾಥಿ9 ಸ್ವಾವಲಂಬನೆಯ ಬದುಕು ಕಟ್ಟಿಕೊಳ್ಳಬಹುದು ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ ಗಾಂಧಿಜಿಯವರ ಆಸೆಯಂತೆ ಶಿಕ್ಷಣ ಮತ್ತು ತತ್ವದ ಆಧಾರದ ಮೇಲೆ ವಿದ್ಯಾರ್ಥಿಗಳಲ್ಲಿ ವೃತ್ತಿ ಶಿಕ್ಷಣದ ಕೌಶಲ್ಯಗಳಾದ ತೋಟಗಾರಿಕೆ, ಕೃಷಿ, ಹೊಲಿಗೆ, ರೇಷ್ಮೆಯಂತ ಕೌಶಲಗಳನ್ನು ಬೆಳೆಸಿದರೆ ಟಚ್ ಅಂಡ್ ಫೀಲ್ ಅನುಭವವಾಗುತ್ತದೆ ಎಂದು ತಿಳಿಸಿದರು.



**ಪ್ರಮುಖ ಸುದ್ದಿ**

# ಸಶಸ್ತ್ರಪಡೆಗಳ ಧ್ವಜ ಬಿಡುಗಡೆ ಮಾಡಿದ ಜಿಲ್ಲಾಧಿಕಾರಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸಶಸ್ತ್ರಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಸಶಸ್ತ್ರಪಡೆಗಳ ಧ್ವಜ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ದೇಶದಲ್ಲಿ ಸೈನಿಕರ ಪಾತ್ರ ಮಹತ್ವವಾಗಿದ್ದು, ದೇಶದ ರಕ್ಷಣೆಗಾಗಿ ಸೈನಿಕರು ಹಗಲಿರುಳು ಶ್ರಮಿಸುತ್ತಿದ್ದಾರೆ. ನಮ್ಮ ವೀರ ಯೋಧರಿಗೆ ಕೃತಜ್ಞತೆ ಸಲ್ಲಿಸಿ, ಪ್ರೋತ್ಸಾಹಿಸಲು ಹಾಗೂ ಅವರ ಕುಟುಂಬಗಳಿಗೆ ಬೆಂಬಲ ಒದಗಿಸಲು ಸಶಸ್ತ ಪಡೆಗಳ ಧ್ವಜನಿಧಿಗೆ ಉದಾರ ಕಾಣಿಕೆ ನೀಡಲು ಸಶಸ್ತ್ರಪಡೆಗಳ ಧ್ವಜ ದಿನಾಚರಣೆಯು ಅತ್ಯುತ್ತಮ ವೇದಿಕೆಯಾಗಿದೆ ಎಂದರು.

ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಮುತುವರ್ಜಿವಹಿಸಿ ಮಾಜಿ ಸೈನಿಕರ ಶ್ರೈಯೋಭಿವೃದ್ಧಿಗೆ ಹಾಗೂ ಕಲ್ಯಾಣ ಕಾರ್ಯಕ್ಕಾಗಿ ನಿಗಧಿತ ಗುರಿಗಿಂತ ಹೆಚ್ಚಿನ ನಿಧಿಯನ್ನು ಸಂಗ್ರಹಿಸಿಕೊಟ್ಟಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಜಿಲ್ಲೆಯ ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಚಟುವಟಿಕೆಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಿವೇಶನಕ್ಕೆ ಜಾಗ ಮಂಜೂರು ಮಾಡಿಕೊಡಬೇಕು ಎಂದು ಬೇಡಿಕೆ ಸಲ್ಲಿಸಿದರು.

ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸತ್ಯನಾರಾಯಣ ಮಾತನಾಡಿ, ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯ ಚಟುವಟಿಕೆ, ಕುಂದು ಕೊರತೆಗಳ ಸಭೆ ನಡೆಸಲು ಚಿತ್ರದುರ್ಗ ನಗರದಲ್ಲಿ ಕಚೇರಿ ನಡೆಸಲು ಜಾಗದ ಅವಶ್ಯಕತೆ ಇದೆ. ಸಂಘದ ಕಾರ್ಯಚಟುವಟಿಕೆಗಾಗಿ ನಗರದ ವೀರಸೌಧ ಸೂಕ್ತವಾಗಿದ್ದು, ಈಗಾಗಲೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯೊಂದಿಗೆ ಪತ್ರವ್ಯವಹಾರ ನಡೆಸಲಾಗಿದೆ ಎಂದು ತಿಳಿಸಿದ ಅವರು, ಇದರ ಜೊತೆಗೆ ಈ ಹಿಂದೆ ಜಿಲ್ಲೆಯ 35 ಜನ ಮಾಜಿ ಸೈನಿಕರಿಗೆ ಜಮೀನು ಮಂಜೂರು ಮಾಡುವಂತೆ ಮನವಿ ಮಾಡಲಾಗಿದ್ದು, ಈ ಕುರಿತು ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಮಾಜಿ ಸೈನಿಕರ ಅಹವಾಲುಗಳನ್ನು ಆಲಿಸಿದ ಜಿಲ್ಲಾಧಿಕಾರಿಗಳು, ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಚಟುವಟಿಕೆ ಅನುಕೂಲವಾಗುವ ನಿಟ್ಟಿನಲ್ಲಿ ನಗರದ ವೀರಸೌಧವನ್ನು ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.ಧ್ವಜ ಬಿಡುಗಡೆ ಸಮಾರಂಭದಲ್ಲಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಸಿಬ್ಬಂದಿಗಳಾದ ವಿ.ನಾರಾಯಣಮೂರ್ತಿ, ಜಿ.ಆರ್.ಬಾಲು, ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸತ್ಯನಾರಾಯಣ, ಸಂಘದ ಸದಸ್ಯರಾದ ಜೈರುದ್ದೀನ್, ವೆಂಕಟೇಶ ರೆಡ್ಡಿ, ಹನುಮಂತರೆಡ್ಡಿ, ವೃಷಭೇಂದ್ರಪ್ಪ, ಸೂರಯ್ಯ ಸೇರಿದಂತೆ ಜಿಲ್ಲೆಯ ಮಾಜಿ ಸೈನಿಕರು, ಮಾಜಿ ಸೈನಿಕರ ಅವಲಂಬಿತರು ಇದ್ದರು.

## ಫಾಸ್ಟ್ ನ್ಯೂಸ್

### ಶಾಲಾ ಆವರಣ ನೈಸರ್ಗಿಕ ಸಂಪತ್ತಿನಿಂದ ಕೂಡಿದರೆ ವಿದ್ಯಾರ್ಥಿಗಳಿಗೆ ಸ್ಫೂರ್ತಿ: ಬಿಇಒ ಸುರೇಶ್



» ಚಳ್ಳಕೆರೆ

ಶಾಲಾ ಆವರಣವೆಲ್ಲಾ ಮರಗಿಡಗಳಿಂದ ತುಂಬಿ ಕಂಗೊಳಿಸಿದರೆ ಉತ್ತಮ ವಾತಾವರಣ ನಿರ್ಮಾಣವಾಗುತ್ತದೆ. ನಮ್ಮ ಸುತ್ತಲು ಹಸಿರಿದ್ದರೆ ನಾವು ಉತ್ತಮವಾಗಿ ಉಸಿರಾಡಬಹುದು. ನಮ್ಮೆಲ್ಲರ ಬದುಕಿಗೆ ಉತ್ತಮ ಪರಿಸರದ ಅವಶ್ಯಕತೆ ಇದ್ದು, ಶಾಲಾ ಆವರಣ, ಗ್ರಾಮೀಣ ಪ್ರದೇಶದ ಮನೆಗಳ ಮುಂದೆ ಹೆಚ್ಚು ಮರಗಿಡಗಳನ್ನು ಬೆಳೆಸಿ ನೈಸರ್ಗಿಕ ಸಂಪತ್ತನ್ನು ರಕ್ಷಿಸುವಲ್ಲಿ ಮುಂದಾಗಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಶುಕ್ರವಾರ ತಳಕು ಹೋಬಳಿ ದೇವರೆಡ್ಡಿಹಳ್ಳಿ ಕ್ಲಸ್ಟರ್ ವಿಭಾಗದ ಪಿಂಜಾರಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಸಸ್ಯಶ್ಯಾಮಲ ಯೋಜನೆಯಡಿ ಮರಗಿಡಗಳನ್ನು ನೆಟ್ಟು ಪೋಷಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಶಾಲಾ ವಿದ್ಯಾರ್ಥಿಗಳು ಇಂದಿನಿಂದಲೇ ಪರಿಸರ ಪ್ರೇಮಿಗಳಾಗಿ, ಶಾಲಾ ಆವರಣದಲ್ಲಿ ಹೆಚ್ಚು ಮರಗಿಡಗಳನ್ನು ಬೆಳೆಸುವತ್ತ ಜಾಗೃತೆ ವಹಿಸಬೇಕು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಶಾಲೆಯ ಮುಖ್ಯೋಪಾಧ್ಯಾಯ ಮಂಜಾನಾಯ್ಕ, ಪ್ರಸ್ತುತ ನಮ್ಮ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದ್ದರೂ ಶಿಕ್ಷಕರ ಸಮೂಹ ಆಗಮಿಸುವ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುತ್ತಾ ಬಂದಿದೆ. ಗ್ರಾಮೀಣ ಭಾಗದ ಮಕ್ಕಳು ಶಿಕ್ಷಣ ವಂಚಿತರಾಗಬಾರದು ಎಂಬ ಉದ್ದೇಶದಿಂದ ಶಾಲೆಯ ಸಹ ಶಿಕ್ಷಕರು ಹಾಗೂ ತಾವು ಮನೆ, ಮನೆಗೂ ಭೇಟಿ ನೀಡಿ ಮಕ್ಕಳನ್ನು ಶಾಲೆಗೆ ದಾಖಲು ಮಾಡಲು ಮನವಿ ಮಾಡಿದ್ದು,ಅದು ಈಗ ಫಲಿಸಿದೆ. ಮುಂದಿನ ದಿನಗಳಲ್ಲೂ ಸಹ ಉಪಯುಕ್ತ ಕಾರ್ಯಕ್ರಮಗಳು ನಿರಂತರವಾಗಿ ಶಾಲೆಯಲ್ಲಿ ನಡೆಸಬೇಕಿದ್ದು, ಇದಕ್ಕೆ ಎಲ್ಲರ ಪ್ರೋತ್ಸಾಹ ಅಗತ್ಯವೆಂದರು. ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಸಹಾಯಕ ನಿರ್ದೇಶಕ ಎಂ.ತಿಪ್ಪೇಸ್ವಾಮಿ, ಶಿಕ್ಷಣ ಸಂಯೋಜಕ ಮಾರುತಿಭಂಡಾರಿ, ಸಿಆರ್‌ಪಿ ಶಿವಣ್ಣ, ಶಿಕ್ಷಕ ರವಿಕುಮಾರ್, ಎಸ್‌ಡಿಎಂಸಿ ಅಧ್ಯಕ್ಷ ತಿಪ್ಪೇಸ್ವಾಮಿ, ಉಪಾಧ್ಯಕ್ಷ ದಾದಾಪೀರ್, ಸದಸ್ಯ ಆಹಮ್ಮದ್ ಮುಂತಾದವರು ಉಪಸ್ಥಿತರಿದ್ದರು.

### ಬುಕ್ಕಿಂಗ್ ಅವಧಿ ವಿಸ್ತರಣೆ

» ದಾವಣಗೆರೆ

ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್, ಪಾರ್ಸೆಲ್, ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6.30 ರವರೆಗೆ ಹಾಗೂ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿನ ಆರ್‌ಎಂಎಸ್ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್ ಹಾಗೂ ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6 ರಿಂದ ರಾತ್ರಿ 11 ಗಂಟೆಯವರೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

### ಡಿಪ್ಲೊಮಾ ತರಬೇತಿ

» ದಾವಣಗೆರೆ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಗಳಿಂದ ಜನವರಿ ಮಾಹೆಯಲ್ಲಿ ಪ್ರಾರಂಭವಾಗಲಿರುವ 6 ತಿಂಗಳ ಅವಧಿಯ ದೂರಶಿಕ್ಷಣ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗಾಗಿ ಸಹಕಾರ ಸಂಘ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತರಬೇತಿ ಹೊಂದದ ಸಿಬ್ಬಂದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ರಾಜ್ಯದ ಬೆಂಗಳೂರು, ಮೈಸೂರು, ಮಡಿಕೇರಿ, ಮೂಡಬಿದ್ರೆ, ಶಿವಮೊಗ್ಗ, ಧಾರವಾಡ, ಬೆಳಗಾವಿ ಹಾಗೂ ಕಲಬುರಗಿ ಸ್ಥಳಗಳಲ್ಲಿ ತರಬೇತಿ ನೀಡಲಾಗುವುದು. ತರಬೇತಿಯನ್ನು ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ ಅಥವಾ ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ಮೇಲ್ಪಟ್ಟವರು ಅರ್ಜಿ ಸಲ್ಲಿಸಬಹುದು. ತರಬೇತಿಯಲ್ಲಿ ಸಂಘ, ಸಂಸ್ಥೆಯಿಂದ ಬರುವ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 400 ಗಳ ಶಿಷ್ಯವೇತನವನ್ನು ನೀಡಲಾಗುವುದು. ಅರ್ಜಿ ಸಲ್ಲಿಸಲು ಡಿ. 31 ಕೊನೆಯ ದಿನವಾಗಿರುತ್ತದೆ. ಆಸಕ್ತರು ಡಿ. 31 ರೊಳಗಾಗಿ ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ., #2532, ಕಲಾಪ್ರಕಾಶ ವೃಂದ, 1ನೇ ಮಹಡಿ, ವಿನೋಬನಗರ 2ನೇ ಮುಖ್ಯರಸ್ತೆ, ಎಂ.ಸಿ.ಸಿ 'ಎ' ಬ್ಲಾಕ್, ದಾವಣಗೆರೆ (ದೂ.ಸಂ. 08192-237672) ಈ ಸಂಸ್ಥೆಯಿಂದ ಶುಲ್ಕ ರೂ. 100 ಗಳನ್ನು ನಗದು ಅಥವಾ ಅಂಚೆ ಮೂಲಕ ರೂ. 125 ಗಳ ಡಿ.ಡಿ. ಪಾವತಿಸಿ ತರಬೇತಿಯ ಅರ್ಜಿ ಫಾರಂ ಮತ್ತು ವಿವರಣಾ ಪುಸ್ತಕವನ್ನು ಪಡೆದು ಭರ್ತಿ ಮಾಡಿ ಆಯಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬೇಕು ಎಂದು ಮುಖ್ಯಕಾರ್ಯನಿರ್ವಹಣಾಧಿಕಾರಿ ಮಂಗಳಗೌಡ ದಾನಪ್ಪಗೌಡ್ರ ತಿಳಿಸಿದ್ದಾರೆ.

### 5637 ಅರ್ಜಿಗಳ ವಿಲೇವಾರಿಗೆ ಕ್ರಮ; ಜಿಲ್ಲಾಧಿಕಾರಿ ಡಾ.ವೆಂಕಟೇಶ್

# ಕಂದಾಯ ಇಲಾಖೆಯಲ್ಲಿ ಜನಸ್ನೇಹಿ ಆಡಳಿತ

» ದಾವಣಗೆರೆ



ಜಿಲ್ಲೆಯಲ್ಲಿ ಆರ್‌ಟಿಸಿ ತಿದ್ದುಪಡಿ ಮಾಡಲು ಆಂದೋಲನವನ್ನು ಕೈಗೊಂಡು 5637 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು ಕಂದಾಯ ಇಲಾಖೆ ಅರ್ಜಿಗಳನ್ನು ಕಾಲಮಿತಿಯಲ್ಲಿ ವಿಲೇವಾರಿ ಮಾಡಿ ಕಳೆದ ಆರು ತಿಂಗಳಲ್ಲಿ ಜನಸ್ನೇಹಿ ಆಡಳಿತ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಪಹಣಿ ತಿದ್ದುಪಡಿಯಡಿ 2023 ರ ಮೇ ಅಂತ್ಯಕ್ಕೆ 5,039 ಅರ್ಜಿಗಳು ಬಾಕಿ ಇದ್ದು ಜೂನ್ 23 ರಿಂದ ನವೆಂಬರ್ 23 ರವರೆಗೆ ಆರು ತಿಂಗಳಲ್ಲಿ ಹೊಸದಾಗಿ ಸ್ವೀಕೃತವಾದ 4438 ಅರ್ಜಿಗಳು ಸೇರಿದಂತೆ 9477 ಪಹಣಿ ತಿದ್ದುಪಡಿ ಅರ್ಜಿಗಳಲ್ಲಿ ಇದೇ ಅವಧಿಯಲ್ಲಿ 5637 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು 2023 ರ ನವೆಂಬರ್ 27 ರ ಅಂತ್ಯಕ್ಕೆ 3,840 ಅರ್ಜಿಗಳು ತಿದ್ದುಪಡಿ ಅರ್ಜಿಗಳು ಬಾಕಿ ಇದ್ದು ಈ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಕಂದಾಯ ನ್ಯಾಯಾಲಯ ಪ್ರಕರಣಗಳ ವಿಲೇವಾರಿ : ದಾವಣಗೆರೆ ಮತ್ತು ಹೊನ್ನಾಳಿ ಉಪವಿಭಾಗಾಧಿಕಾರಿಗಳ ನ್ಯಾಯಾಲಯ ಮತ್ತು ಜಿಲ್ಲೆಯ 6 ತಾಲ್ಲೂಕಗಳ ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ಕಳೆದ 6 ತಿಂಗಳ ಅವಧಿಯಲ್ಲಿ ಸುಮಾರು 2 ರಿಂದ 5 ವರ್ಷ ಮೇಲ್ಪಟ್ಟು ವಿಚಾರಣೆಗೆ ಬಾಕಿ ಇದ್ದ ಪ್ರಕರಣಗಳಲ್ಲಿ 1,116 ಪ್ರಕರಣಗಳನ್ನು ವಿಲೇವಾರಿ ಮಾಡಿ ಆದೇಶ ಹೊರಡಿಸಿರುತ್ತಾರೆ. ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ 202 ಪ್ರಕರಣಗಳನ್ನು ಇತ್ಯರ್ಥಪಡಿಸಿ ಆದೇಶ ಹೊರಡಿಸಲಾಗಿದ್ದು ಒಟ್ಟು 1,318 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿರುತ್ತದೆ.

ಕಂದಾಯ ಸಚಿವರ ನಿರ್ದೇಶನದ ಮೇರೆಗೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಾರದಲ್ಲಿ 3 ದಿನ ಹಾಗೂ ತಹಶೀಲ್ದಾರ್ ನ್ಯಾಯಾಲಯದಲ್ಲಿ 2 ದಿನ ಕಡ್ಡಾಯವಾಗಿ ನ್ಯಾಯಾಲಯಗಳ ಕಲಾಪಗಳನ್ನು ನಡೆಸಿ 90 ದಿನಗಳ ನಂತರದ ಎಲ್ಲಾ ಪ್ರಕರಣಗಳ ವಿಲೇವಾರಿ ಮಾಡಲಾಗಿದೆ.

ಮುಟೇಷನ್ ಪ್ರಕರಣಗಳ ವಿಲೇವಾರಿ : ಜಿಲ್ಲೆಯಲ್ಲಿ ಜಮೀನಿನ ಹಕ್ಕು ಬದಲಾವಣೆ, ಮ್ಯುಟೇಷನ್ ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ನೋಟಿಸ್ ಸಹಿತ ಪ್ರಕರಣಗಳಲ್ಲಿ ನೋಟಿಸ್ ಅವಧಿ ಮುಕ್ತಾಯದ ನಂತರ ವಿಲೇವಾರಿ ಸರಾಸರಿ ದಿನಗಳನ್ನು ಕಳೆದ 6 ತಿಂಗಳಲ್ಲಿ 21 ದಿನದಿಂದ 13 ದಿನಗಳಿಗೆ ಇಳಿಸಲಾಗಿದ್ದು ಶೀಘ್ರ ವಿಲೇವಾರಿಗೆ ಕ್ರಮವಹಿಸಲಾಗಿದೆ.

ನೋಟೀಸ್ ಅವಧಿ (7 ದಿನ) ಮುಕ್ತಾಯವಾದ 3 ದಿನಗಳೊಳಗೆ ಹಾಗೂ ಪೌತಿ, ವಿಲ್ ಆಧಾರಿತ ಖಾತೆ ಬದಲಾವಣೆ ಪ್ರಕರಣಗಳಲ್ಲಿ ನೋಟೀಸ್ ಅವಧಿ (15 ದಿನ) ಮುಕ್ತಾಯವಾದ ನಂತರ 3 ದಿನಗಳೊಳಗಾಗಿ ಮ್ಯುಟೇಷನ್ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತಿದೆ. ನೋಟಿಸ್ ರಹಿತ ಪ್ರಕರಣಗಳಾದ ಆಧಾರ, ಭೋಗ್ಯ ಮತ್ತು ಬಿಡುಗಡೆ , ಪೋಡಿ ಹಾಗೂ ಕೋರ್ಟ್ ಆದೇಶ, ಭೂ ಪರಿವರ್ತನೆ ಪ್ರಕರಣಗಳಲ್ಲಿ 1 ದಿನಗಳೊಳಗಾಗಿ ವಿಲೇಪಡಿಸಲಾಗುತ್ತಿದ್ದು ಆದ್ಯತೆಮೇರೆಗೆನಿಗಧಿತಕಾಲಾವಧಿಯೊಳಗೆ ಕ್ರಮವಹಿಸಲಾಗುತ್ತಿದೆ.

ಸರ್ಕಾರಿ ಜಮೀನು ಟ್ಯಾಗ್: ಜಿಲ್ಲೆಯಲ್ಲಿನ ಎಲ್ಲಾ ಸರ್ಕಾರಿ ಜಮೀನುಗಳು, ಪಿಟಿಸಿಎಲ್ (ಕಖಿಅಐ) ವ್ಯಾಪ್ತಿಗೊಳಪಡುವ ಮಂಜೂರಿದಾರರ ಜಮೀನು ಹಾಗೂ ಇತರೆ ವರ್ಗಗಳ (ಓಂಟ ಕಖಿಅಐ) ವ್ಯಾಪ್ತಿಗೊಳಪಡುವ ಮಂಜೂರಿದಾರರ ಜಮೀನುಗಳಲ್ಲಿ ಅಕ್ರಮ ಖಾತೆ ವಹಿವಾಟುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಟ್ಟು 43,794 ಜಮೀನುಗಳ ವಿವರಗಳನ್ನು ಗುರುತಿಸಿ, ಭೂಮಿ ತಂತ್ರಾಂಶದಲ್ಲಿ ಪ್ರಾಗ್ (ಲಾಕ್) ಮಾಡಲಾಗಿದ್ದು ಅಕ್ರಮ ವಹಿವಾಟು ನಡೆಯದಂತೆ ತಡೆಹಿಡಿಯಲಾಗಿದೆ. ಈ ಪೈಕಿ 18,829 ಸರ್ಕಾರಿ ಜಮೀನುಗಳು, 20,416 ಪಿಟಿಸಿಎಲ್ ವ್ಯಾಪ್ತಿಯ ಜಮೀನುಗಳು ಮತ್ತು 4549 ಇತರೆ ವರ್ಗಗಳಿಗೆ ಸೇರಿದವರ ಜಮೀನುಗಳನ್ನು ಒಳಗೊಂಡಿರುತ್ತದೆ.

ಇ-ಆಫೀಸ್: ದಾವಣಗೆರೆ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್ ಕಛೇರಿ ಹಾಗೂ ಉಪವಿಭಾಗಾಧಿಕಾರಿಗಳ ಕಛೇರಿಯಲ್ಲಿ ಸೆಪ್ಟೆಂಬರ್ ಮಾಹೆಯಿಂದ ಇ-ಆಫೀಸ್ ನಲ್ಲಿ ಕಾರ್ಯನಿರ್ವಹಣೆ ಕಡ್ಡಾಯಗೊಳಿಸಲಾಗಿದೆ. ದಾವಣಗೆರೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಒಟ್ಟು 2,08,180 ಅರ್ಜಿಗಳನ್ನು, ದಾವಣಗೆರೆ ಹಾಗೂ ಹೊನ್ನಾಳಿ ಉಪವಿಭಾಗಾಧಿಕಾರಿಗಳ ಕಛೇರಿಯಲ್ಲಿ ಇ-ಆಫೀಸ್ ಮೂಲಕ 5,103 ಅರ್ಜಿಗಳನ್ನು ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಕಛೇರಿಗಳಲ್ಲಿ ಒಟ್ಟು 6,881 ಅರ್ಜಿ ವಿಲೇವಾರಿ ಮಾಡಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 2,20,164 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, ಮುಂದುವರೆದ ಭಾಗವಾಗಿ ನಾಡಕಛೇರಿ ಮತ್ತು ರಾಜಸ್ವ ನಿರೀಕ್ಷಕರ ಕಛೇರಿಯಲ್ಲಿ ಇ-ಆಫೀಸ್ ಅನುಷ್ಠಾನಕ್ಕೆ ಕ್ರಮವಹಿಸಲಾಗಿದೆ.

ಕಂದಾಯ ಗ್ರಾಮ ರಚನೆ: ಜಿಲ್ಲೆಯಲ್ಲಿ ಗುರುತಿಸಲಾಗಿರುವ 80 ಜನವಸತಿಗಳ ಪೈಕಿ ಈಗಾಗಲೇ 46 ಜನವಸತಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗಿದೆ. ಬಾಕಿ ಉಳಿದ 34 ಜನ ವಸತಿಗಳಿಗೆ ಸಂಬಂಧಿಸಿದಂತೆ ನಿರಂತರವಾಗಿ ಕ್ಷೇತ್ರ ಮಟ್ಟದ ಅಧಿಕಾರಿಗಳ ಸಭೆ ನಡೆಸಿ, ದಾಖಲೆಗಳ ಪರಿಶೀಲಿನೆ ಕೈಗೊಂಡು ಒಟ್ಟು 30 ಜನವಸತಿಗಳ ಪ್ರಸ್ತಾವನೆಗಳನ್ನು ಪ್ರಾಥಮಿಕ ಅಧಿಸೂಚನೆಗೆ ಸರ್ಕಾರಕ್ಕೆ ಕಳುಹಿಸಲಾಗಿದೆ. ಇನ್ನುಳಿದ 4 ಜನವಸತಿಗಳು ಖಾಸಗಿ ಜಮೀನಿನಲ್ಲಿ ಸ್ಥಾಪನೆಗೊಂಡಿದ್ದು ಖಾಸಗಿ ಜಮೀನುಗಳನ್ನು ಸರ್ಕಾರಕ್ಕೆ, ನಿಹಿತಗೊಳಿಸಲು ಕರ್ನಾಟಕ ಭೂಸುಧಾರಣೆ ಕಾಯ್ದೆಯಡಿ ಜಿಲ್ಲಾ ಮಟ್ಟದಲ್ಲಿ ಅಧಿಸೂಚನೆ ಹೊರಡಿಸುವ ಕಾರ್ಯ ಪ್ರಗತಿಯಲ್ಲಿದೆ.

ಸಾಮಾಜಿಕ ಭದ್ರತಾ ಯೋಜನೆ : ಜಿಲ್ಲೆಯಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿಯಲ್ಲಿ ಕಳೆದ 6 ತಿಂಗಳಲ್ಲಿ 9,532 ಫಲಾನುಭವಿಗಳಿಗೆ ಪಿಂಚಣಿ ಮಂಜೂರು ಮಾಡಲಾಗಿದೆ. ಆಧಾರ್ ಆಧಾರಿತ ನೇರ ಹಣ ಸಂದಾಯ ಯೋಜನೆಯಡಿ ತರುವ ನಿಟ್ಟಿನಲ್ಲಿ 24,422 ಪಿಂಚಣಿದಾರರ ಉಳಿತಾಯ ಖಾತೆಗೆ ಎನ್.ಪಿ.ಸಿ.ಐ ಜೋಡಣೆ ಮಾಡಲಾಗಿದೆ.

ತಾತ್ಕಾಲಿಕವಾಗಿ ತಡೆಹಿಡಿಯಲಾದ 800 ಫಲಾನುಭವಿಗಳ ಪಿಂಚಣಿ ಹಾಗೂ ವಿವಿಧ ಕಾರಣಗಳಿಂದ ರದ್ದಾದ 2,109 ಪ್ರಕರಣಗಳನ್ನು ಚಾಲ್ತಿಗೊಳಿಸಲಾಗಿದೆ. 200 ಪಿಂಚಣಿದಾರರ ಆಧಾರ್ ಸೀಡಿಂಗ್ ಮಾಡಲಾಗಿದೆ. ರಾಷ್ಟ್ರೀಯ ಕುಟುಂಬ ನೆರವು ಯೋಜನೆಯಡಿ 562 ಪ್ರಕರಣಗಳಲ್ಲಿ ಸಹಾಯಧನ ವಿತರಿಸಲು ಹಾಗೂ 7 ರೈತರ ಆತ್ಮಹತ್ಯೆ ಪ್ರಕರಣಗಳು, 5 ರೈತರ ಆಕಸ್ಮಿಕ ಮರಣ, ಹಾವು ಕಡಿತ ಪ್ರಕರಣಗಳು ಮತ್ತು 20 ಬಣವೆ ನಷ್ಟ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದೆ.

ಕಂದಾಯದಾಖಲೆಗಳಡಿಜಿಟಲೀಕರಣ: ಜಿಲ್ಲೆಯ ತಾಲ್ಲೂಕು ಕಛೇರಿಗಳಲ್ಲಿನ ಕಂದಾಯದಾಖಲೆಗಳುಮತ್ತುಕಡತಗಳನ್ನು ಡಿಜಿಟಲೀಕರಣ ಮಾಡಲಾಗುತ್ತಿದ್ದು ಪ್ರಸ್ತುತ ದಾವಣಗೆರೆ ಹಾಗೂ ಹರಿಹರ ತಾಲ್ಲೂಕುಗಳ ಡಿಜಿಟಲೀಕರಣ ಕಾರ್ಯ ಮುಗಿತಿಯಲ್ಲಿದೆ.

ಜನತಾದರ್ಶನ ಅರ್ಜಿಗಳ ವಿಲೇವಾರಿಯಲ್ಲಿ ರಾಜ್ಯಕ್ಕೆ ಪ್ರಥಮ ಜಿಲ್ಲೆ.: ಮುಖ್ಯಮಂತ್ರಿಗಳ ಮಹತ್ವಾಕಾಂಕ್ಷೆಯ ಜನತಾದರ್ಶನ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ಸ್ಥಳೀಯ ಶಾಸಕರ ನೇತೃತ್ವದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಂಡು ಒಟ್ಟು 1,599 ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸ್ವೀಕರಿಸಿ, ಒಟ್ಟು 1,516 ಅರ್ಜಿಗಳನ್ನು ಇತ್ಯರ್ಥ ಪಡಿಸಲಾಗಿದ್ದು, ವಿಲೇವಾರಿಯಲ್ಲಿ ರಾಜ್ಯದಲ್ಲಿ ಜಿಲ್ಲೆಯು ಪ್ರಥಮ ಸ್ಥಾನದಲ್ಲಿದೆ..

48 ವರ್ಷಗಳಿಂದ ಬಾಕಿ ಇದ್ದ ಗ್ರಾಮಠಾಣ ಇ-ಸ್ವತ್ತು ಪ್ರಕರಣದ ಇತ್ಯರ್ಥ: ಚನ್ನಗಿರಿ ತಾಲೂಕಿನ ಆಲೂರು ಗ್ರಾಮದಲ್ಲಿ ನಡೆದ ಜನತಾದರ್ಶನ ಕಾರ್ಯಕ್ರಮದಲ್ಲಿ 48 ವರ್ಷಗಳ ಹಿಂದೆ ಸ್ಥಳಾಂತರಗೊಂಡ ಆಲೂರು ಗ್ರಾಮವು ಗ್ರಾಮಠಾಣ ವ್ಯಾಪ್ತಿಗೆ ಸೇರದ ಕಾರಣ, ಇ-ಸ್ವತ್ತು ಪಡೆಯಲು ಸಾಧ್ಯವಾಗದೇ ಎಲ್ಲಾ ಸರ್ಕಾರಿ ಸೌಲಭ್ಯಗಳಿಂದ ಗ್ರಾಮಸ್ಥರು ವಂಚಿತವಾಗಿದ್ದು, ಪ್ರಕರಣವನ್ನು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಜನವಸತಿ ಇದ್ದ ಜಮೀನುಗಳನ್ನು ಗ್ರಾಮಠಾಣ ಎಂದು ಭೂದಾಖಲೆಗಳಲ್ಲಿ ನಮೂದಿಸಲಾಗಿದೆ. ಹಾಗೂ ದಾವಣಗೆರೆ ತಾಲ್ಲೂಕು ಕಡ್ಲೆಬಾಳು ಗ್ರಾಮದಲ್ಲಿ ನಡೆದ ಜನತಾದರ್ಶನ ಕಾರ್ಯಕ್ರಮದಲ್ಲಿ ಸುಮಾರು 40 ವರ್ಷದಿಂದ ಮಾಳಗೊಂಡನಹಳ್ಳಿಯಲ್ಲಿ ವಾಸಿಸುತ್ತಿದ್ದ ಜನವಸತಿ ಪ್ರದೇಶವನ್ನು ಗಾಮಠಾಣ ವಿಸ್ತರಣೆ ಮಾಡಿ ಅಮೃತನಗರ ಗ್ರಾಮವನ್ನಾಗಿ ಇಸ್ವತ್ತು ವಿತರಣೆ ಮಾಡಲಾಗಿದೆ.

ಸ್ಮಶಾನ ಒತ್ತುವರಿ ತೆರವು: ದಾವಣಗೆರೆ ತಾಲ್ಲೂಕು ಬೆಳವನೂರು ಗ್ರಾಮದಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಗ್ರಾಮಸ್ಥರ ಬೇಡಿಕೆಯಂತೆ ಬೆಳವನೂರು ಮತ್ತು ತುರ್ಚಘಟ್ಟ ಗ್ರಾಮದ ಸ್ಮಶಾನಗಳನ್ನು ಅಳತೆ ಮಾಡಿಸಿ, ಒತ್ತುವರಿ ತೆರವುಗೊಳಿಸಿ ಹದ್ದುಬಸ್ತು ಮಾಡಿಸಿ ಗ್ರಾಮಸ್ಥರ ಬಳಕೆಗೆ ಅವಕಾಶ ಕಲ್ಪಿಸಲಾಗಿದೆ.

ಫ್ರೂಟ್ ತತ್ರಾಂಶ: ಜಿಲ್ಲೆಯ ರೈತರು ಬರ ಪರಿಹಾರದ ಇನ್‌ಫುಟ್ ಸಬ್ಸಿಡಿ ಪಡೆಯಲು ಜಮೀನಿನ ವಿವರವನ್ನು ಫ್ರೂಟ್ಸ್ ತತ್ರಾಂಶಕ್ಕೆ ಕಡ್ಡಾಯವಾಗಿ ದಾಖಲಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಒಟ್ಟು 4,86,330 ಪ್ಲಾಟ್‌ಗಳು ಇದ್ದು, ಅದರಲ್ಲಿ ಈಗಾಗಲೇ 3,61,280 ಪ್ಲಾಟ್‌ಗಳು ಫ್ರೂಟ್ಸ್‌ನಲ್ಲಿ ನೊಂದಾಯಿಸಲಾಗಿರುತ್ತದೆ. ಬಾಕಿ ಉಳಿದ 1,25,050 ಪ್ಲಾಟ್ ಗಳು ತತ್ರಾಂಶದಲ್ಲಿ ನೊಂದಾಯಿಸಲು ಆಂದೋಲನದ ರೀತಿಯಲ್ಲಿ ಯೋಜನೆ ರೂಪಿಸಿ ಎಲ್ಲಾ ಪ್ಲಾಟ್ ಗಳನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ಸೇರ್ಪಡೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಒಂದು ವಾರದಲ್ಲಿ ಉಳಿದ ಎಲ್ಲಾ ಪ್ಲಾಟ್‌ಗಳನ್ನು ಸೇರ್ಪಡೆ ಮಾಡಲು ಕಂದಾಯ, ಕೃಷಿ, ಪಶುಸಂಗೋಪನಾ ಇಲಾಖೆಗಳಿಂದ ಅಗತ್ಯ ಕ್ರಮವಹಿಸಲಾಗಿದೆ.

ದಾವಣಗೆರೆ ಜಿಲ್ಲೆಯು ಪ್ರಸ್ತುತ ಅತಿಹೆಚ್ಚು ಪ್ಲಾಟ್‌ಗಳನ್ನು ನೊಂದಣಿ ಮಾಡಿದ್ದು, ಶೇಕಡವಾರು ಪ್ರಗತಿಯಲ್ಲಿ ರಾಜ್ಯದಲ್ಲಿಯೇ 3 ನೇ ಸ್ಥಾನದಲ್ಲಿರುತ್ತದೆ. ರೈತರು ತಮ್ಮ ಪ್ಲಾಟ್‌ಗಳನ್ನು ತಂತ್ರಾಂಶದಲ್ಲಿ ಸೇರ್ಪಡೆಗೊಳಿಸಲು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ,ರೇಷ್ಮೆಇಲಾಖೆ,ಪಶುಸಂಗೋಪನೆ ಇಲಾಖೆಗಳನ್ನು ಸಂಪರ್ಕಿಸಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

## ಚಳ್ಳಕೆರೆ ಯುಜಿಡಿ ಕಾಮಗಾರಿ ಮಂಜುರಾತಿ ನೀಡಿ

» ಚಳ್ಳಕೆರೆ



ಚಳ್ಳಕೆರೆ ತಾಲ್ಲೂಕಿನ ಬಹುದೊಡ್ಡ ಹೋಬಳಿ ಕೇಂದ್ರವಾದ ಪರಶುರಾಮಪುರವನ್ನು ತಾಲ್ಲೂಕು ಕೇಂದ್ರವನ್ನಾಗಿ ಮಾಡಬೇಕೆಂದು ಕಳೆದ ಸುಮಾರು 30 ವರ್ಷಗಳಿಂದ ಹೋರಾಟ ನಡೆಯುತ್ತಿದ್ದು, ಪರಶುರಾಮಪುರವನ್ನು ತಾಲ್ಲೂಕು ಕೇಂದ್ರವನ್ನಾಗಿ ಮಾಡಿದ್ದಲ್ಲಿ ಪಕ್ಕದ ಆಂಧ್ರ ಪ್ರದೇಶದಿಂದಲೂ ಹೆಚ್ಚಿನ ವ್ಯವಹಾರ ನಡೆದು ಜನರು ಸುಖ,ಶಾಂತಿ,ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತದೆ. ಆ ಭಾಗದ ಜನತೆಯ ಕನಸನ್ನು ನನಸು ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಂದಾಯ ಸಚಿವ ಕೃಷ್ಣೇಬೈರೇಗೌಡ ಅವಕಾಶ ಮಾಡಿಕೊಡಬೇಕೆಂದು ಶಾಸಕ ಟಿ.ರಘುಮೂರ್ತಿ ಬೆಳಗಾವಿಯಲ್ಲಿ ನಡೆದ ವಿಧಾನಸಭಾ ಅಧಿವೇಶನದಲ್ಲಿ ಸರ್ಕಾರವನ್ನು ಒತ್ತಾಯಿಸಿದರಲ್ಲದೆ, ಆ ಭಾಗದ ಜನರ ಸಮಸ್ಯೆಗೆ ಸ್ಪಂದಿಸುವಲ್ಲಿ ಸರ್ಕಾರ ದಿಟ್ಟ ನಿರ್ಧಾರ ಕೈಗೊಳ್ಳಬೇಕೆಂದು ಒತ್ತಾಯಪೂರ್ವಕ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರ ಆಶ್ರಯ ಮನೆಗಳಿಗೆ ನೀಡುತ್ತಿರುವ ಮೊತ್ತ ಅತಿ ಕಡಿಮೆ ಇದ್ದು ಇತ್ತೀಚೆಗೆ ಎಲ್ಲಾ ಕಚ್ಚಾವಸ್ತುಗಳ ದರ ಏರಿಕೆ ಯಾಗಿದ್ದು ಮನೆಗಳ ನಿರ್ಮಾಣ ಕಾರ್ಯವೂ ದುಬಾರಿಯಾಗಿದೆ. ಆದರೆ, ಸರ್ಕಾರ ಮಾತ್ರ ಈ ಹಣವನ್ನು ಏರಿಕೆ ಮಾಡದೇ ಇರುವುದರಿಂದ ಫಲಾನುಭವಿಗಳು ಮನೆ ಮಂಜೂರಾತಿ ಪಡೆದರೂ ಸಹ ನಿರ್ಮಿಸಲು ಚಿಂತನೆ ನಡೆಸಬೇಕಿದೆ. ಅದೇ ರೀತಿ ಅಲೆಮಾರಿ, ಅರೆಅಲೆಮಾರಿ ಮನೆಗಳ ಯೋಜನಾ ಹೆಚ್ಚವನ್ನು 5 ಲಕ್ಷಕ್ಕೆ ಏರಿಕೆ ಮಾಡಬೇಕು. ಈಗಿರುವ 1.20 ಲಕ್ಷ ಹಣ ಸಾಲದು ಚಳ್ಳಕೆರೆ ತಾಲ್ಲೂಕಿನಲ್ಲಿ ಒಟ್ಟು 3500 ಮನೆಗಳು ನಿರ್ಮಾಣಕ್ಕೆ ಮಂಜೂರಾತಿ ದೊರಕಿದ್ದು ಕೇವಲ ಕೆಲವೇ ಮನೆಗಳು ಮಾತ್ರ ನಿರ್ಮಾಣ ಮಾಡಲು ಆಗಿದೆ ಎಂದರು.ಚಳ್ಳಕೆರೆ ನಗರಕ್ಕೆ ಅವಶ್ಯವಿರುವ ಯುಜಿಡಿ ಕಾಮಗಾರಿಯ ಬಗ್ಗೆ 2014-15ನೇ ಸಾಲಿನಲ್ಲಿ ಒತ್ತಾಯ ಮಾಡಿದ್ದು ಆಗ ಕೇವಲ 120 ಕೋಟಿ ಹಣ ಬೇಕಿತ್ತು. ಆದರೆ, ಈಗ 350 ಕೋಟಿಗೂ ಹೆಚ್ಚು ಯುಜಿಡಿ ಕಾಮಗಾರಿಗೆ ವೆಚ್ಚ ಮಾಡಬೇಕಿದೆ.

## ಕಿರಾಣಿ ಅಂಗಡಿ ಮೇಲೆ ದಾಳಿ, 10110 ಮೌಲ್ಯದ ಮದ್ಯ ವಶ

» ದಾವಣಗೆರೆ

ಜಗಳೂರು ತಾಲ್ಲೂಕಿನ ಸಿದ್ದಮ್ಮನಹಳ್ಳಿ ಗ್ರಾಮದ ಮಂಜುನಾಥ್ ಎಂಬ ವ್ಯಕ್ತಿಗೆ ಸೇರಿದ ಕಿರಾಣಿ ಅಂಗಡಿ ಮೇಲೆ ಹರಿಹರ ವಲಯ ಹಾಗೂ ದಾವಣಗೆರೆ ವಲಯ 1 ಮತ್ತು 2ರ ಅಧಿಕಾರಿ ಹಾಗೂ ಸಿಬ್ಬಂದಿಗಳು ದಾಳಿ ನಡೆಸಿ ರೂ.10,110 ಮೌಲ್ಯದ ಅಕ್ರಮ ಮಾರಾಟದ ಮದ್ಯ ವಶಪಡಿಸಿಕೊಳ್ಳಲಾಗಿದೆ. ಜಿಲ್ಲಾ ಅಬಕಾರಿ ಉಪಾಯುಕ್ತರ ನೇತೃತ್ವದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಲಾಗಿ, ಒಂದು ಲೀಟರ್ ಸಾಮರ್ಥ್ಯದ 76 ನೀರಿನ ಬಾಟಲಿಗಳಲ್ಲಿ 76 ಲೀಟರ್ ಸೇಂದಿ, ಒರಿಜಿನಲ್ ಚಾಯ್ಸ್ ವಿಸ್ಕಿಯ 90 ಮಿಲಿಯ 48 ಟೆಟ್ರೋಪ್ಯಾಕೇಟ್ ಮತ್ತು 500 ಮಿಲಿಯ ಪವರ್ ಕೂಲ್ 6 ಟಿನ್‌ಗಳನ್ನು ಇಲಾಖಾ ವಶಕ್ಕೆ ಪಡೆದು ಆರೋಪಿಯಾದ ಮಂಜುನಾಥ್‌ನ್ನು ನೋಟೀಸ್ ನೀಡಿ ಬಿಡುಗಡೆಗೊಳಿಸಲಾಗಿದೆ ಎಂದು ಜಿಲ್ಲಾ ಅಬಕಾರಿ ಉಪಾಯುಕ್ತರಾದ ಸ್ವಪ್ನ ಆರ್.ಎಸ್ ತಿಳಿಸಿದ್ದಾರೆ.

### ಪ್ರಮುಖ ಸುದ್ದಿ

# ನಗರದಲ್ಲಿ ನೇತ್ರ ತಪಾಸಣಾ ಶಸ್ತ್ರ ಚಿಕಿತ್ಸಾ ಶಿಬಿರ

» ಚಿತ್ರದುರ್ಗ






ಜೀವನದಲ್ಲಿ ಕಣ್ಣಿಗೆ ಮಹತ್ವವಾದ ಸ್ಥಾನ ಇದೆ. ಅದರ ಬಗ್ಗೆ ಕಾಳಜಿಯನ್ನು ವಹಿಸಬೇಕು ಯಾವುದೇ ಕಾರಣಕ್ಕೂ ಕಣ್ಣನ್ನು ನಿರ್ಲಕ್ಷ ಮಾಡಬೇಡಿ ಎಂದು ಹಿರಿಯ ನೇತ್ರ ತಜ್ಞ ಡಾ.ಪ್ರದೀಪ್ ತಿಳಿಸಿದರು.

ಶಂಕರ್ ಕಣ್ಣಿ ಆಸ್ಪತ್ರೆ ಶಿವಮೊಗ್ಗ, ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾ ಸಂಸ್ಥೆ ಸಿಬಾರ ಗುತ್ತಿನಾಡು, ರೋಟರಿ ಕ್ಲಬ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಜಿಲ್ಲಾ ಅಂಧತ್ವ ನಿಯಂತ್ರಣಾ ಕಾರ್ಯಕ್ರಮ ಮತ್ತು ತಾಲ್ಲೂಕು ವೈದ್ಯಾಧಿಕಾರಿಗಳ ಕಚೇರಿ ಸಂಯುಕ್ತಾಶ್ರಯದಲ್ಲಿ ಸಿಬಾರದ ಗುತ್ತಿನಾಡು ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಉಚಿತ ನೇತ್ರ ತಪಾಸಣಾ ಮತ್ತು ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.ಮಾನವ ದೇಹದಲ್ಲಿ ಕಣ್ಣು ಬಹಳ ಮುಖ್ಯವಾದ ಅಂಗವಾಗಿದೆ ನಮ್ಮ ದೇಹದಲ್ಲಿ ಬೇರೆ ಅಂಗಗಳಲ್ಲಿ ನ್ಯೂನ್ಯತೆ ಬಂದರೆ ಬದುಕಬಹುದಾಗಿದೆ ಆದರೆ ಕಣ್ಣು ಇಲ್ಲವಾದರೆ ನಮ್ಮ ಪ್ರತಿಯೊಂದು ಕೆಲಸಕ್ಕೂ ಬೇರೆಯವರನ್ನು ಆಶ್ರಯಿಸಬೇಕಿದೆ. ಇದರಿಂದ ನಮ್ಮ ಮುಖಕ್ಕೆ ಎಷ್ಟು ಪ್ರಾಮುಖ್ಯತೆಯನ್ನು ನೀಡುತ್ತೇವೆ ಅಷ್ಟೇ ಪ್ರಾಮುಖ್ಯತೆಯನ್ನು ಕಣ್ಣುಗಳಿಗೂ ಸಹಾ ನೀಡಬೇಕಿದೆ. ನಿಮ್ಮ ಮರಣದ ನಂತರ ನಿಮ್ಮ ಕಣ್ಣುಗಳನ್ನು ಮಣ್ಣಿನಲ್ಲಿ ಉಳದೆ ಬೆಂಕಿಯಲ್ಲಿ ಸುಡದೇ ದಾನವನ್ನು ಮಾಡುವುದರ ಮೂಲಕ ಇತರರಿಗೆ ಬೆಳಕಾಗಬೇಕಿದೆ ಎಂದರು.

ರೋಟರಿ ಕ್ಲಬ್‌ನಂತಹ ಹಲವಾರು ಸಂಸ್ಥೆಗಳು ಈ ರೀತಿಯಾದ ಉಚಿತವಾದ ಆರೋಗ್ಯ ಶಿಬಿರಗಳನ್ನು ನಡೆಸುವುದರ ಮೂಲಕ ನಿಮ್ಮಗಳ ಆರೋಗ್ಯದ ಬಗ್ಗೆ ಕಾಳಜಿಯನ್ನು ವಹಿಸುತ್ತಿದ್ದಾರೆ. ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿ ನಿಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಂಡು ಏನಾದರೂ ತೊಂದರೆ ಇದ್ದರೆ ಈಗಲೇ ಸರಿಪಡಿಸಿಕೊಳ್ಳಿ ಎಂದು ಕಿವಿ ಮಾತು ಹೇಳಿದರು.

ರೋಟರಿ ಕ್ಲಬ್ ಅಧ್ಯಕ್ಷ ಕನಕರಾಜು ಮಾತನಾಡಿ,ರೋಟರಿಯಂತಹಸಂಸ್ಥೆಗಳು ಈ ರೀತಿಯಾದ ಉಚಿತವಾದ ಆರೋಗ್ಯ ಶಿಬಿರಗಳನ್ನು ವರ್ಷದಲ್ಲಿ ಹಲವಾರು ಬಾರಿ ಏರ್ಪಡಿಸುವುದರ ಮೂಲಕ ಜನರ ಆರೋಗ್ಯದ ಬಗ್ಗೆ ಕಾಳಜಿಯನ್ನು ತೋರಿಸುತ್ತಿದೆ. ಇದರ ಪ್ರಯೋಜನವನ್ನು ನೀವುಗಳು ಪಡೆಯಬೇಕಿದೆ. ಸಣ್ಣ-ಪುಟ್ಟ ತೊಂದರೆ ಇದ್ದರೆ ಅವುಗಳನ್ನು ಇಲ್ಲಿಯೇ ಬಗೆಹರಿಸಿಕೊಳ್ಳಬಹುದಾಗಿದೆ ಎಂದರು.

ಡಾ. ಸೌಂದರ್ಯ, ನಿಕೇಲೇಶ್, ಶಿವಕುಮಾರ್, ರೋಟರಿ ಕ್ಲಬ್‌ನ ಮಾಜಿ ಅಧ್ಯಕ್ಷ ಎಸ್.ವಿರೇಶ್, ವೀರಭದ್ರಸ್ವಾಮಿ, ಡಾ,ರಾಮು ಹಾಜರಿದ್ದರು. 158 ರೋಗಿಗಳನ್ನುತಪಾಸಣೆಯನ್ನುನಡೆಸಿದ್ದು,88 ಜನರಿಗೆ ಶಸ್ತ್ರ ಚಿಕಿತ್ಸೆಗೆ ಒಳಪಡಿಸಲಾಗುವುದು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T